ವಿಜಯಪುರ | ಸಂಪುಟ 04 | ಸಂಚಿಕೆ 067 | ಪುಟ 04 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com RNI NO: KARKAN/2023/86203 ಬುಧವಾರ, ಏಪ್ರಿಲ್, 29, 2026

"ಹಳ್ಳಿಗಳಲ್ಲಿ ಉತ್ತಮ ಪರಿಸರ, ಮೂಲಭೂತ ಸೌಕರ್ಯ ಹಾಗೂ ಆರೋಗ್ಯ, ಶಿಕ್ಷಣ ಮುಖ್ಯವಾಗಿ ಬೇಕು. ಐದು ಗ್ಯಾರಂಟಿಗಳ ಮಧ್ಯೆ ರಾಜ್ಯ ಸರ್ಕಾರ ಸಿಂದಗಿ ಮತಕ್ಷೇತ್ರಕ್ಕೆ ನೂರಾರು ಕೋಟಿ ಅನುದಾನವನ್ನ ನೀಡುತ್ತಲ್ಲಿದೆ. ನನಗೆ ನೀಡಿದ ಪ್ರತಿಯೊಂದು ಮತವು ಅದು ಅಭಿವೃದ್ಧಿಗಾಗಿ ಮೀಸಲಿಡುತ್ತೇನೆ."



■ ಅಶೋಕ ಮನಗೂಳಿ
ಶಾಸಕರು, ಸಿಂದಗಿ

# ಜಿಲ್ಲೆಯ ಅಭಿವೃದ್ಧಿಗೆ ನಿಗದಿತ ಅವಧಿಯಲ್ಲಿ ಶ್ರಮಿಸಿ

## ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳು ಆಯೋಗದ ಅಧ್ಯಕ್ಷ ಡಾ.ಮೂರ್ತಿ ಎಲ್. ಅಧಿಕಾರಿಗಳಿಗೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕಾನೂನಿನಡಿ ಬರುವ ಕೆಲಸವನ್ನು ನಿಗದಿತ ಅವಧಿಯಲ್ಲಿ ನಿರ್ವಹಿಸಿ ಜಿಲ್ಲೆಯ ಅಭಿವೃದ್ಧಿಗೆ ಶ್ರಮ ವಹಿಸಬೇಕು ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳು ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ಎಲ್. ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಗರ ಹುಂಕುಂ ಅರ್ಜಿ ವಿಲೇವಾರಿ ಮಾಡಬೇಕು. ಗೋಮಾಳ ಜಮೀನು ಅರ್ಜಿ ಹಾಕಿಕೊಂಡಿದ್ದಾರೆ. ಆ ಅರ್ಜಿಗಳನ್ನು ವಿಲೇವಾರಿ ಮಾಡಬೇಕು ಎಂದರು.

ಸ್ಮಶಾನ ಭೂಮಿ ಎಲ್ಲೆಲ್ಲಿ ಅವಶ್ಯಕತೆ ಇದೆ ಎಂಬುದಾಗಿ ಜಾಗೆ ಗುರುತಿಸಬೇಕು. ತಹಶೀಲ್ದಾರ್, ಎಸಿ ಮೂಲಕ ಡಿಸಿ ಗಮನಕ್ಕೆ ತಂದು ಲೋಪ ದೋಷಗಳಾಗದಂತೆ ಆದ್ಯತೆಯ ಮೇಲೆ ಕ್ರಮ ಕೈಗೊಳ್ಳಬೇಕು ಎಂದರು.

ಗೋಮಾಳ ಜಮೀನಿಗೆ ಸಂಬಂಧಿಸಿದ ಸರ್ಕಾರದ ಅಗತ್ಯತೆ ಅನುಸಾರ ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಖಾಸಗಿ ಜಮೀನು ಮಂಜೂರು ಮಾಡುವ ಯಾವುದೇ ಪ್ರಸ್ತಾವನೆ ನಮ್ಮ ಮುಂದಿರುವುದಿಲ್ಲ. ಅಂತಹ ಅರ್ಜಿಗಳ ಬಂದ ಸಂದರ್ಭದಲ್ಲಿ ಹಿಂಬರಹ ನೀಡಿ ತಕ್ಷಣ ವಿಲೇವಾರಿ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಅರ್ಜಿ ಅರ್ಹತೆ ಇರುವ ಪ್ರಕರಣಗಳನ್ನು ಎಲ್ಲ ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಈಗಾಗಲೇ ಅರ್ಜಿ ಸಲ್ಲಿಸಿದ್ದಲ್ಲಿ ನಿಯಮನುಸಾರ ಕ್ರಮವಹಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪಾಲಿಕೆಯಲ್ಲಿ ಒಟ್ಟು ಅನುದಾನದಲ್ಲಿ ಪಜಾ ಪಪಂ ವರ್ಗದವರಿಗೆ ಎಷ್ಟು ಅನುದಾನ ನಿಗದಿಪಡಿಸಿದ್ದಿರಿ. ಪೌರ ಕಾರ್ಮಿಕರಿಗೆ ಯಾವ ಲೆಕ್ಕ ಶೀರ್ಷಿಕೆಯಲ್ಲಿ ನೀಡುತ್ತೀರಿ. ಶೇ.25 ರಷ್ಟು ಅನುದಾನ ಮೀಸಲಿಡಬೇಕು. ಫಲಾನುಭವಿಗಳ ಆಯ್ಕೆಯನ್ನು ಹೇಗೆ ಮಾಡುತ್ತೀರಿ. ಪಜಾ, ಪಪಂ ಎಷ್ಟು ಜನ ಗುತ್ತಿಗೆದಾರರಿದ್ದಾರೆ. ಎಷ್ಟು ಜನ ಗುತ್ತಿಗೆದಾರ-ರಿದ್ದಾರೆ. ಆ ಮಾಹಿತಿಯನ್ನು ಆಯೋಗಕ್ಕೆ ತಕ್ಷಣ ನೀಡಬೇಕು ಎಂದು ಹೇಳಿದರು.

ಪೌರ ಕಾರ್ಮಿಕರಿಗೆ ವೇತನ ಯಾವುದರ ಮೂಲಕ ಅನುದಾನ ನೀಡುತ್ತೀರಿ. ಪೌರ ಕಾರ್ಮಿಕರು ಹೊರಗುತ್ತಿಗೆ ಆಧಾರದಲ್ಲಿ ಯಾರೂ ಇರುವುದಿಲ್ಲ. ಏಜೆನ್ಸಿ ಮೂಲಕ ನೀಡುವ ಹೊರಗುತ್ತಿಗೆ ಸಿಬ್ಬಂದಿ ಸಮರ್ಪಕವಾಗಿ ನಿರ್ವಹಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಇನ್ನೊಂದೆಡೆ ಕೆಲ ಪ್ರಕರಣಗಳಲ್ಲಿ ಲೋಪ ಎಸಗುವ ಎನ್‌ಜಿಓಗಳನ್ನು ಕಪ್ಪು ಪಟ್ಟಿಗೆ ಸೇರ್ಪಡೆ ಮಾಡಬೇಕು ಎಂದು ಅಧ್ಯಕ್ಷರು ಅಧಿಕಾ-ರಿಗಳಿಗೆ ಸೂಚಿಸಿದರು.




ಪೌರ ಕಾರ್ಮಿಕರ ಮಕ್ಕಳ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸಿ. ವಿವಿಧ ಸಿದ್ಧತಾ ಪೂರ್ವ ತಯಾರಿ ನಡೆಸುವ ಪೌರ ಕಾರ್ಮಿಕರ ಮಕ್ಕಳಿಗೆ ಪ್ರೋತ್ಸಾಹಿಸಿ. ನಿಗದಿತ ಅನುದಾನ ಅದೇ ಕಾರಣಕ್ಕೆ ವಿನಿಯೋಗಿಸಬೇಕು ಎಂದರು.

ಎಸ್ ಸಿ ಪಿ ಟಿ ಎಸ್ ಪಿ ಅನುದಾನ ಬಳಕೆ ನಾಮಫಲಕ ಅಳವಡಿಸಬೇಕು. ಸ್ಥಳೀಯ ಸಂಸ್ಥೆಗಳಲ್ಲೂ ಎಸ್ ಸಿ ಪಿ ಟಿ ಎಸ್ಪಿ ಅನುದಾನ ಅಪವ್ಯಯವಾಗದಂತೆ ಅನುದಾನ ವಿನಿಯೋಗಿಸಿ ಈ ಜನಾಂಗದವರ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಸಭೆಯಲ್ಲಿದ್ದ ಅಧಿಕಾ-ರಿಗಳಿಗೆ ಸೂಚಿಸಿದರು.

ಪಜಾ, ಪಪಂ ಉದ್ದಿಮೆದಾರರಿಗೆ ಪಿಡಿಓ, ಇಓ ನಗರಸಭೆ ಕೆಲಸ ಕಾಮಗಾರಿ ನೀಡುವ ಮೂಲಕ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದರು.

ಕೃಷಿ ಇಲಾಖೆಯಿಂದ ಕೇಂದ್ರ ಮತ್ತು ರಾಜ್ಯ ವಲಯದ ಅನುದಾನ ಸದ್ಬಳಕೆ ಮಾಡಿಕೊಂಡು ಈ ಜನಾಂಗದ ರೈತರಿಗೆ ಕೃಷಿ ಪರಿಕರ ಒದಗಿಸಿ ಕೊಡಬೇಕು ಎಂದು ಮೂರ್ತಿ ಸಲಹೆ ಮಾಡಿದರು.

ತೋಟಗಾರಿಕಾ ಇಲಾಖೆ ಹನಿ ನೀರಾವರಿ ಯೋಜನೆಯಡಿ ತೊಡಗಿಸಿಕೊಳ್ಳಲು ಹಾಗೂ ರೇಷ್ಮೆ ಇಲಾಖೆಗೆ ಸಹಾಯಧನ ಒದಗಿಸಬೇಕು ಎಂದರು.

ಪಶುಸಂಗೋಪನೆ, ಮೀನುಗಾರಿಕೆ, ಅರಣ್ಯ ಹಾಗೂ ಸಹಕಾರ ಇಲಾಖೆಗಳನ್ನು ಮುಖ್ಯವಾಹಿನಿಗೆ ತರಲು ಸದಸ್ಯರನ್ನು ಹೆಚ್ಚು ಮಾಡಿಸಬೇಕು. ಜನಂಖ್ಯಾಧಾ-ರಿತ ಸದಸ್ಯರನ್ನು ಗುರುತಿಸಿ, ಸದಸ್ಯರನ್ನು ಮಾಡಬೇಕು ಎಂದರು.


ವಿವಿಧ ಅಭಿವೃದ್ಧಿ ನಿಗಮ ಟಾರ್ಗೆಟ್ ಅನುಸಾರ ಭೂಒಡೆತನ ಯೋಜನೆ ಗುರಿ ಸಾಧಿಸಿ ನಿಗಮಗಳಿಂದ ಅನುಷ್ಠಾನಗೊಳ್ಳುವ ಯೋಜನೆಗಳ ಪ್ರಯೋಜನ ಪಡೆದುಕೊಂಡು ಆರ್ಥಿಕ ಸಬಲರಾಗಲು ಅರ್ಹರಿಗೆ ಯೋಜನೆ ಒದಗಿಸಬೇಕು ಎಂದು ಮೂರ್ತಿ ಅಧಿಕಾ-ರಿಗಳಿಗೆ ಸೂಚಿಸಿದರು.

ಮಿಷನ್ ವಿದ್ಯಾಪುರ ಯೋಜನೆಯಡಿ ಎಲ್ಲ ಸ್ಮಾರ್ಟ ಟಿವಿ ಲ್ಯಾಬ್ ಮಟೆರಿಯಲ್ ನೀಡಿದೆ. ಅಂಗನವಾಡಿಗಳಲ್ಲಿ ವಿವಿಧ ಆಟಿಕೆ ಸಾಮಗ್ರಿ ಒದಗಿಸಿ ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಅಧಿಕಾರಿಗಳು ಶ್ರಮಿಸಬೇಕು ಎಂದರು. ಕೈಮಗ್ಗ ಮತ್ತು ಜವಳಿ ಉದ್ಯಮಕ್ಕೆ ಗಾರ್ಮೆಂಟ್ ಫ್ಯಾಕ್ಟ್ರಿಗೆ ಅವಕಾಶ ನೀಡಬೇಕು ಎಂದರು.

ಕೈಗಾರಿಕಾ ಇಲಾಖೆ ಮುಳವಾಡ ಬಳಿ ಶೇ. 40 ರಷ್ಟು ಜಮೀನು ಅಲೌಟ್ ಮಾಡಲು ಜಿಲ್ಲಾಧಿಕಾರಿ ಅವರ ನೇತೃತ್ವದಲ್ಲಿ ನೀಡಬಹುದು. ಈಗಾಗಲೇ 2 ಎಕರೆಯಲ್ಲಿ 12 ಜನರಿಗೆ ಕೆಐ-ಡಿಬಿಯಲ್ಲಿ ಜಾಗೆ ನೀಡಲಾಗಿದೆ ಎಂದರು.

ಪಜಾ, ಪಪಂಕ್ಕೆ ಸೇರಿದ ವಸತಿ ಶಾಲೆ ಹಾಗೂ ನಿಲಯಗಳ ವ್ಯವಸ್ಥೆ ಸುಧಾರಣೆಗೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಅಲ್ಲಿ ಪೌಷ್ಠಿಕಾಂಶ, ಆಹಾರ ಹಾಗೂ ಮಕ್ಕಳ ಆರೋಗ್ಯವನ್ನು ನಿರಂತರವಾಗಿ ತಪಾಸಣೆ ನಡೆಸುತ್ತಿರಬೇಕು. ಯಾವುದೇ ದೂರಿಗೆ ಆಸ್ಪದೇ ನೀಡದೇ ಖಾಸಗಿ ವಸತಿ ನಿಲಯಗಳ ಮೂಲಭೂತ ಸೌಲಭ್ಯ ಒದಗಿಸಬೇಕು. ಸರಕಾರದ ಅನುದಾನ ಖರ್ಚಾಗಬೇಕು. ವೆಚ್ಚವಾದ ಅನುದಾನದ ಕುರಿತು ಬೋರ್ಡ್ ಹಾಕಬೇಕು ಎಂದರು. ಇಲ್ಲವಾದಲ್ಲಿ ತಪ್ಪಿತಸ್ಥ ಅಧಿಕಾರಿ ಹಾಗೂ ಸಿಬ್ಬಂದಿ ವಿರುದ್ಧ ಆಯೋಗ ಕ್ರಮ ಕೈಗೊಳ್ಳಲಿದೆ ಎಂದರು.

ಸಭೆಯಲ್ಲಿ ಆಯೋಗದ ಸದಸ್ಯರಾದ ಎನ್. ದಿವಾಕರ, ಸುನೀಲ ಉಕ್ಕಲಿ, ಗೀತಾ ಥಾವಂಶಿ, ಜಿಲ್ಲಾಧಿಕಾರಿ ಡಾ. ಆನಂದ.ಕೆ, ಜಿಪಂ ಸಿಇಓ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ, ಆಯೋಗದ ಕಾರ್ಯದರ್ಶಿಗಳಾದ ಎಚ್. ಎಂ. ಶಿವರಾಂ, ಸಂಶೋಧನಾಧಿಕಾರಿ ಸಿಂಧೂ ಎಚ್.ಎಸ್, ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಇಂಡಿ ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಹೇಶ ಪೋತದಾರ, ಕ್ರೀಡಾಧಿಕಾರಿ ರಾಜಶೇಖರ ದೈವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿ ಸಂತೋಷ ಭೋವಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕಾ ಮಟ್ಟದ ಅಧಿಕಾರಿಗಳು ಜಿಲ್ಲೆಯ ಗ್ರಾಪಂ ಪಿಡಿಓಗಳು ಉಪಸ್ಥಿತರಿದ್ದರು.



# ಹಳ್ಳಿಗಳು ಅಭಿವೃದ್ಧಿಯಿಂದ ಮಾತ್ರ ದೇಶದ ಅಭಿವೃದ್ಧಿ :ಶಾಸಕ ಮನಗೂಳಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಹಳ್ಳಿಗಳು ಅಭಿವೃದ್ಧಿಯಾದಾಗ ಮಾತ್ರ ದೇಶದ ನಿಜವಾದ ಅಭಿವೃದ್ಧಿ ಸಾಧ್ಯ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ತಾಲೂಕಿನ ಬಂದಾಳ ಗ್ರಾಮದಲ್ಲಿ ಹಳ್ಳದ ಬ್ರಿಡ್ಜ್ ನಿರ್ಮಾಣಕ್ಕೆ ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರಾದ 1.81 ಕೋಟಿ ಮೊತ್ತದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಹಳ್ಳಿಗಳಲ್ಲಿ ಉತ್ತಮ ಪರಿಸರ, ಮೂಲಭೂತ ಸೌಕರ್ಯ ಹಾಗೂ ಆರೋಗ್ಯ, ಶಿಕ್ಷಣ ಮುಖ್ಯವಾಗಿ ಬೇಕು.ನಮ್ಮ ಕ್ಷೇತ್ರದ ರಸ್ತೆಗಳ ಅಭಿವೃದ್ಧಿಯ ಜೊತೆಗೆ ಕ್ಷೇತ್ರದ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರದಿಂದ ಅನುದಾನ ತರಲಾಗಿದ್ದು, ಗುತ್ತಿಗೆದಾರರು ಉತ್ತಮ ಗುಣಮಟ್ಟದ ಕಾಮಗಾರಿ ಮಾಡಬೇಕು. ಸಾರ್ವಜನಿಕರು ಕಳಪೆ ಕಾಮಗಾರಿಯ ಬಗ್ಗೆ ನಿಗಾವಹಿಸಬೇಕು. ಮುಂದಿನ ದಿನಮಾನಗಳಲ್ಲಿ ಇನ್ನೂ ಹೆಚ್ಚಿನ ಮೂಲಸೌಕರ್ಯಗಳನ್ನು ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಐದು ಗ್ಯಾರಂಟಿಗಳ ಮಧ್ಯ ರಾಜ್ಯ ಸರ್ಕಾರ ಸಿಂದಗಿ ಮತಕ್ಷೇತ್ರಕ್ಕೆ ನೂರಾರು ಕೋಟಿ ಅನುದಾನವನ್ನ ನೀಡುತ್ತಲ್ಲಿದೆ. ನನಗೆ ನೀಡಿದ ಪ್ರತಿಯೊಂದು ಮತವು ಅದು ಅಭಿವೃದ್ಧಿಗಾಗಿ ಮೀಸಲಿಡುತ್ತೇನೆ ಎಂದರು.

ಇದೇ ಸಂದರ್ಭದಲ್ಲಿ ಮುಖಂಡರಾದ ಬಸಯ್ಯ ಹಿರೇಮಠ, ವಿ.ಬಿ.ಕುರಡೆ, ಮುತ್ತು ಮುಂಡೇವಾಡಗಿ, ನಾರಾಯಣ ಕುಲಕರ್ಣಿ, ಕುಮಾರ ದೇಸಾಯಿ, ಷಣ್ಮುಖಯ್ಯ ಹಿರೇಮಠ, ದಯಾನಂದ ಹಿರೇಮಠ, ದುಂಡಪ್ಪ ಬಿರಾದಾರ, ಸುರೇಶ ಬೆನಕನಳ್ಳಿ, ಶಿರಪ್ಪ ಉಕ್ಕಲಿ, ಪದಮಣ್ಣ ದೇವೂರ, ಬಸಣ್ಣ ಯಲಮೇಲಿ, ರಜಾಕ ಸೋಂಪುರ, ಸಿದ್ದು ಬಿಸನಾಳ, ಶರಣಪ್ಪ ಜಮಾದಾರ, ಗೊಲ್ಲಾಳಪ್ಪ ನಾಯ್ಕೋಡಿ, ರಾಮು ಯಳಮೇಲಿ, ಧರ್ಮರಾಜ ಬಡಾನೂರ, ಜಾನಪ್ಪ ನಾಯ್ಕೋಡಿ, ಸಿದ್ದಪ್ಪ ಜಮಾದಾರ, ಕಾರ್ಯಕರ್ತರು, ಅಭಿಮಾನಿಗಳು, ಗ್ರಾಮಸ್ಥರು ಸೇರಿದಂತೆ ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.

# ವಸತಿ ಶಾಲೆ, ನಿಲಯ ವ್ಯವಸ್ಥೆ ಜಂಟಿ ಸಮಿತಿ ರಚನೆ

## ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ ಎಲ್. ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪಜಾ, ಪ.ಪಂಗಡದ ಹಲವಾರು ವಸತಿ ಶಾಲೆ ಮತ್ತು ನಿಲಯಗಳ ಸಮಸ್ಯೆಗಳ ಪಜಾ, ಪಪಂ ವರ್ಗಗಳ ಮಕ್ಕಳಿರುವ ಹಾಸ್ಟೇಲ್ ನಲ್ಲಿ ಬೇರೆಯವರು ವಾಸವಿದ್ದು, ಇದನ್ನು ಆಯೋಗ ಗಂಭೀರವಾಗಿ ಪರಿಗಣಿಸಿದ್ದು, ಬೇರೆಯವರು ಉಳಿದುಕೊಳ್ಳದಂತೆ ನೋಡಿಕೊಳ್ಳಲು ಜಂಟಿ ಸಮಿತಿ ಮೂಲಕ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ ಎಲ್. ಹೇಳಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾ-ರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲು ಕ್ರಮವಹಿಸಲಾಗುವುದು ಎಂದರು.

ನಕಲಿ ಜಾತಿ ಪ್ರಮಾಣ ಪತ್ರದ ದುರ್ಬಳಕೆ ಗಂಭೀರವಾಗಿ ಪರಿಗಣಿಸಿದ್ದು, ನಕಲಿ ಜಾತಿ ಪ್ರಮಾಣ ಪತ್ರ ದುರುಪಯೋಗ ಮಾಡಿಕೊಳ್ಳುವವರ ವಿರುದ್ಧ ಕೇಂದ್ರ ಹಾಗೂ ರಾಜ್ಯ ಸರಕಾರಗಳ ಆದೇಶಗಳನ್ನು ಪರಿಶೀಲಿಸಿ, ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ಪಜಾ, ಪಂಗಡದ ವಿವಿಧ ನಿಗಮಕ್ಕೆ ಅನುದಾನ ಒದಗಿಸಕು ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ಸರಕಾರದ ಕಾರ್ಯದರ್ಶಿ ಮೂಲಕ ಅನುದಾನಕ್ಕೆ ಕೋರಲಾಗುವುದು. ವಿಜಯಪುರದ ಸಭೆಯಲ್ಲಿ ಸಾಕಷ್ಟು ಕುಂದುಕೊರತೆಗಳನ್ನು ಆಲಿಸಿದ್ದೇನೆ. ಹೇಳಿಕೆ ಮೂಲಕ ಲಿಖಿತ ದೂರುಗಳನ್ನು ಸ್ವೀಕರಿಸಿದ್ದೇನೆ. ಎಲ್ಲ ದೂರುಗಳಿಗೆ ನ್ಯಾಯ ದೊರಕಿಸಿ ಕೊಡಲಾಗುವುದು ಎಂದರು.



ಇನ್ನೊಂದೆಡೆ ಅಧಿಕಾರಿಗಳು ಸರ್ಕಾರದ ಪ್ರತಿಯೊಂದೂ ಆದೇಶಗಳನ್ನು ಪಾಲನೆ ಮಾಡಬೇಕು. ಒಂದು ವೇಳೆ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಣ್ಯ ಕ್ರಮ ವಹಿಸಲಾಗುವುದು ಎಂದರು.

ಜಿಲ್ಲೆಯಲ್ಲಿ ಪಜಾ, ಪಪಂ ಜನಾಂಗದವರಿಗೆ ಸ್ಮಶಾನ ಭೂಮಿ ಬಗ್ಗೆ ಸಾಕಷ್ಟು ದೂರುಗಳು ಬಂದಿವೆ. ಎಲ್ಲೆಲ್ಲಿ ಸಮಸ್ಯೆಗಳಿವೆ. ಅಲ್ಲಿ ಸ್ಮಶಾನ ಭೂಮಿ ಒದಗಿಸಲು ಅಧಿಕಾ-ರಿಗಳಿಗೆ ಸೂಚಿಸಲಾಗಿದೆ ಎಂದರು.

ಸ್ವಚ್ಚತೆ ಕಾಪಾಡುವ ಪೌರ ಕಾರ್ಮಿಕರು ಯಾವುದೇ ಸಮಸ್ಯೆಯಾಗದ ರೀತಿಯಲ್ಲಿ ಹಾಗಾಗಿ ಸರ್ಕಾರದ ಆಶಯದಂತೆ ಪೌರಕಾರ್ಮಿಕರಿಗೆ ಅವರಿಗೆ ದೊರಕುವ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಪಜಾ, ಪಪಂ ನಿಗಮಗಳಿಗೆ ಕ್ರಮಬದ್ಧವಾಗಿ ಅನುದಾನ ಒದಗಿಸಲು ಸಮಾಜ ಕಲ್ಯಾಣ ಸಚಿವರನ್ನು ಕೋರಲಾಗುವುದು.

ಅಲೆಮಾರಿ ಜನಾಂಗದವರಿಗಾಗಿ ಯಾವುದೇ ಕಾರಣಕ್ಕೂ ಒಕ್ಕಲೆಬ್ಬಿಸಬೇಡಿ. ಗೋಮಾಳ ಅರ್ಜಿ ಹಾಕಿಕೊಂಡಿದ್ದರೆ ರೆಗ್ಯುಲರೈಜ್ ಮಾಡಲು ಸಿಎಂ ಅವ-ರಿಗೂ ಗಮನ ತರಲಾಗುವುದು ಎಂದರು.

ಎಸ್ ಸಿಪಿ ಟಿ ಎಸ್ ಪಿ ಅನುದಾನ ಬಳಕೆ ನಾಮ ಫಲಕ ಅಳವಡಿಸಲು ಕ್ರಮಕ್ಕೆ ಸೂಚಿಸಲಾಗಿದೆ. ಮುಂದಿನ ದಿನಗಳಲ್ಲಿ ಪತ್ರಮುಖೇನ ಅಧಿಕಾರಿ ವರ್ಗದವ-ರಿಗೆ ಲೋಪ ದೋಷ ಕಂಡುಬಂದಲ್ಲಿ ನಿರ್ದಾಕ್ಷಣ್ಯ ಕ್ರಮವಹಿಸಲಾಗುವುದು ಎಂದು ಹೇಳಿದರು.

ಆಯೋಗದ ಸದಸ್ಯರಾದ ಸುನೀಲ ಉಕ್ಕಲಿ, ಎನ್ .ದಿವಾಕರ್ ಹಾಗೂ ಗೀತಾ ಥಾವಂಶಿ, ಜಿಲ್ಲಾಧಿಕಾರಿ ಡಾ.ಆನಂದ ಕೆ, ಜಿಪಂ ಸಿಇಓ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಸೇ-ರಿದಂತೆ ಪ ಉಪಸ್ಥಿತರಿದ್ದರು.

# ಬಿಸಿಲ ಝಳಕ್ಕೆ ತತ್ತರಿಸಿದ ಕುಕ್ಕುಟೋದ್ಯಮ: ಸಾಕಾಣಿಕೆಗಾರರ ಸಂಕಷ್ಟ

## ಬಿಸಿಲಿನ ತಾಪಮಾನ ಭಾರಿ ಹೆಚ್ಚಳ | ಕೋಳಿಗಳ ಆರೋಗ್ಯ, ಉತ್ಪಾದನೆ ಹಾಗೂ ಸಾಕಾಣಿಕಾರರ ಆರ್ಥಿಕ ಸ್ಥಿತಿಗೆ ಗಂಭೀರ ಹೊಡೆತ

■ ಉದಯರಶ್ಮಿ ದಿನಪತ್ರಿಕೆ

■ ವರದಿ: ಸಿದ್ರಾಮ್ ಎಮ್ ಇಟ್ಟಿ

ಜಮಖಂಡಿ: ರಾಜ್ಯದ ವಿವಿಧ ಭಾಗಗಳಂತೆ ಜಮಖಂಡಿ ತಾಲೂಕು ಕೂಡ ಈ ಬಾರಿ ಭಾರೀ ಬಿಸಿಲಿನ ತಾಪಮಾನಕ್ಕೆ ಒಳಗಾಗಿದ್ದು, ಇದರ ಪರಿಣಾಮ ಕುಕ್ಕುಟೋದ್ಯಮದ ಮೇಲೆ ತೀವ್ರವಾಗಿ ಬೀಳುತ್ತಿದೆ. ದಿನದಿಂದ ದಿನಕ್ಕೆ ಏರುತ್ತಿರುವ ಉಷ್ಣಾಂಶವು ಕೋಳಿಗಳ ಆರೋಗ್ಯ, ಉತ್ಪಾದನೆ ಹಾಗೂ ಸಾಕಾಣಿಕಾರರ ಆರ್ಥಿಕ ಸ್ಥಿತಿಗೆ ಗಂಭೀರ ಹೊಡೆತ ನೀಡುತ್ತಿದೆ.

ಸ್ಥಳೀಯ ಕುಕ್ಕುಟ ಸಾಕಾಣಿಕಾರರ ಮಾಹಿತಿಯಂತೆ, ಸಾಮಾನ್ಯವಾಗಿ 25ರಿಂದ 30 ಡಿಗ್ರಿ ಸೆಲ್ಸಿಯಸ್ ನಡುವೆ ಕೋಳಿಗಳು ಉತ್ತಮವಾಗಿ ಬೆಳೆಯುತ್ತವೆ. ಆದರೆ ಇತ್ತೀಚಿನ ದಿನಗಳಲ್ಲಿ ತಾಪಮಾನ 38ರಿಂದ 42 ಡಿಗ್ರಿ ಸೆಲ್ಸಿಯಸ್ ವರೆಗೆ ಏರಿಕೆಯಾಗಿರುವುದರಿಂದ ಕೋಳಿಗಳು ತೀವ್ರ ಉಷ್ಣ ಒತ್ತಡಕ್ಕೆ ಒಳಗಾಗುತ್ತಿವೆ. ಇದರ ಪರಿಣಾಮವಾಗಿ ಅವುಗಳ ಆಹಾರ ಸೇವನೆ ಗಣನೀಯವಾಗಿ ಕುಸಿಯುತ್ತಿದೆ. ಆಹಾರ ಸೇವನೆ ಕಡಿಮೆಯಾದಂತೆ ದೇಹದ ತೂಕವೂ ಕಡಿಮೆಯಾಗುತ್ತಿದ್ದು, ಬೆಳವಣಿಗೆ ವಿಳಂಬವಾಗುತ್ತಿದೆ.

> ಸರ್ಕಾರವು ತಕ್ಷಣವೇ ಕುಕ್ಕುಟೋದ್ಯಮಕ್ಕೆ ನೆರವು ನೀಡಬೇಕು ಎಂಬ ಆಗ್ರಹ ಕೇಳಿಬರುತ್ತಿದೆ. ವಿದ್ಯುತ್ ದರದಲ್ಲಿ ರಿಯಾಯಿತಿ, ಶೀತಲೀಕರಣ ವ್ಯವಸ್ಥೆಗಳಿಗೆ ಅನುದಾನ, ನೀರಿನ ಸರಬರಾಜಿಗೆ ವಿಶೇಷ ವ್ಯವಸ್ಥೆ, ಹಾಗೂ ನಷ್ಟ ಅನುಭವಿಸಿದ ಸಾಕಾಣಿಕಾರರಿಗೆ ಪರಿಹಾರ ಧನ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.



ಈ ಪರಿಸ್ಥಿತಿಯನ್ನು ಎದುರಿಸಲು ಸಾಕಾಣಿಕಾರರು ಹಲವು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ. ಕೋಳಿ ಶೆಡ್‌ಗಳಲ್ಲಿ ತಂಪು ನೀರಿನ ಸಿಂಪಡಣೆ, ಫ್ಯಾನ್‌ಗಳ ಬಳಕೆ, ಹಸಿರು ಜಾಲರಿ (ಗ್ರೀನ್ ನೆಟ್) ಅಳವಡಿಕೆ, ಶೆಡ್‌ಗಳ ಮೇಲೆ ಹುಲ್ಲು ಅಥವಾ ತಂಪು ವಸ್ತುಗಳನ್ನು ಹಾಕುವುದು, ನೀರಿಗೆ ಎಲೆಕ್ಟ್ರೋಲೈಟ್‌ಗಳ ಮಿಶ್ರಣ ನೀಡುವುದು ಮುಂತಾದ ಕ್ರಮಗಳನ್ನು ಅನುಸರಿಸುತ್ತಿದ್ದಾರೆ. ಆದರೂ, ನಿರಂತರವಾಗಿ ಹೆಚ್ಚುತ್ತಿರುವ ಉಷ್ಣಾಂಶವು ಈ ಕ್ರಮಗಳ ಪರಿಣಾಮಕಾರಿತ್ವವನ್ನು ಕಡಿಮೆ ಮಾಡುತ್ತಿದೆ.

> "ಕೋಳಿ ಆಹಾರದ ಬೆಲೆ ಏರಿಕೆಯೂ ಸಾಕಾಣಿಕಾರರ ಸಮಸ್ಯೆಯನ್ನು ಮತ್ತಷ್ಟು ಗಂಭೀರಗೊಳಿಸಿದೆ. ಮೆಕ್ಕೆಜೋಳ, ಸೇರಿದಂತೆ ವಿವಿಧ ಆಹಾರ ಪದಾರ್ಥಗಳ ದರ ಏರಿಕೆಯಿಂದ ಉತ್ಪಾದನಾ ವೆಚ್ಚ ಹೆಚ್ಚಾಗಿದೆ. ಆದಾಯ ಕಡಿಮೆಯಾಗುತ್ತಿರುವ ಈ ಸಂದರ್ಭದಲ್ಲಿ ಹೆಚ್ಚಿದ ವೆಚ್ಚವನ್ನು ನಿರ್ವಹಿಸುವುದು ಸಾಕಾಣಿಕಾರರಿಗೆ ಕಷ್ಟಕರವಾಗಿದೆ."
> ■ ರಾಜು ಮಿರ್ಜಿ
> ಕೋಳಿ ಸಾಕಾಣಿಕೆಗಾರ ರೈತ.

ಪಶುಸಂಗೋಪನಾ ಇಲಾಖೆ ಅಧಿಕಾರಿಗಳು ಫಾರ್ಮ್‌ಗಳಿಗೆ ಭೇಟಿ ನೀಡಿ ಜಾಗೃತಿ ಮೂಡಿಸುತ್ತಿದ್ದರೂ, ವ್ಯಾಪಕ ಮಟ್ಟದಲ್ಲಿ ನೆರವು ಅಗತ್ಯವಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ಒಟ್ಟಾರೆ, ಬಿಸಿಲಿನ ತೀವ್ರತೆ ಮುಂದುವರಿದರೆ ಜಮಖಂಡಿ ತಾಲೂಕಿನಲ್ಲಿ ಕುಕ್ಕುಟೋದ್ಯಮಕ್ಕೆ ದೊಡ್ಡ ಮಟ್ಟದ ಹಾನಿಯಾಗುವ ಸಾಧ್ಯತೆ ಇರುವುದರಿಂದ, ಸರ್ಕಾರ ಹಾಗೂ ಸಂಬಂಧಿತ ಇಲಾಖೆ ತುರ್ತು ಕ್ರಮ ಕೈಗೊಳ್ಳಬೇಕಾಗಿದೆ. ಇಲ್ಲದಿದ್ದರೆ, ಈ ಉದ್ಯಮವನ್ನು ಅವಲಂಬಿಸಿರುವ ನೂರಾರು ಕುಟುಂಬಗಳ ಜೀವನೋಪಾಯ ಸಂಕಷ್ಟಕ್ಕೀಡಾಗುವ ಭೀತಿ ಎದುರಾಗಿದೆ.

### ಮೊಟ್ಟೆ ಉತ್ಪಾದನೆಗೂ ಹೊಡೆತ

ಮೊಟ್ಟೆ ಉತ್ಪಾದನೆಗೂ ಬಿಸಿಲಿನ ತೀವ್ರತೆ ದೊಡ್ಡ ಹೊಡೆತ ನೀಡಿದೆ. ಸಾಕಾಣಿಕಾರರ ಪ್ರಕಾರ, ಹಿಂದೆ ದಿನಕ್ಕೆ ನಿರಂತರವಾಗಿ ದೊರೆಯುತ್ತಿದ್ದ ಮೊಟ್ಟೆಗಳ ಸಂಖ್ಯೆ ಈಗ ಶೇಕಡಾವಾರು 20ರಿಂದ 30ರಷ್ಟು ಇಳಿಕೆಯಾಗಿರುವುದು ಗಮನಾರ್ಹವಾಗಿದೆ. ಇದು ಮಾರುಕಟ್ಟೆಯಲ್ಲಿ ಸರಬರಾಜು ಕುಸಿತಕ್ಕೆ ಕಾರಣವಾಗಿದ್ದು, ಬೆಲೆಯಲ್ಲಿ ಅಸ್ಥಿರತೆ ಉಂಟಾಗುತ್ತಿದೆ.

ಬಿಸಿಲಿನ ಪರಿಣಾಮದಿಂದ ಕೋಳಿಗಳಲ್ಲಿ ನೀರಿನ ಅವಶ್ಯಕತೆ ಹೆಚ್ಚಾಗುತ್ತಿದ್ದು, ಸರಿಯಾದ ಪ್ರಮಾಣದಲ್ಲಿ ನೀರು ಲಭ್ಯವಿಲ್ಲದಿದ್ದರೆ ಅವು ಬೇಗನೆ ದೌರ್ಬಲ್ಯಕ್ಕೊಳಗಾಗಿ ಸಾವನ್ನಪ್ಪುವ ಸಾಧ್ಯತೆ ಹೆಚ್ಚಿದೆ. ಕೆಲವು ಫಾರ್ಮ್‌ಗಳಲ್ಲಿ ಈಗಾಗಲೇ ಕೋಳಿಗಳ ಸಾವು ಪ್ರಕರಣಗಳು ವರದಿಯಾಗುತ್ತಿದ್ದು, ಇದು ಸಾಕಾಣಿಕಾರರಲ್ಲಿ ಆತಂಕ ಹೆಚ್ಚಿಸಿದೆ.

# ನೃತ್ಯ ಆತ್ಮದ ಗುಪ್ತ ಭಾಷೆ..

ಇಂದು (ಏಪ್ರೀಲ್-29 ಬುಧವಾರ) "ವಿಶ್ವ ನೃತ್ಯ ದಿನ" ದ ನಿಮಿತ್ಯ ಈ ವಿಶೇಷ ಲೇಖನ

■ ಉದಯರಶ್ಮಿ ದಿನಪತ್ರಿಕೆ

ಖ್ಯಾತ ನೃತ್ಯಗಾರ ಮಾರ್ಥಾ ಗ್ರಹಾಂ ಅವರು "ನೃತ್ಯವು ಆತ್ಮದ ಗುಪ್ತ ಭಾಷೆ" ಎಂದು ಹೇಳಿದ್ದಾರೆ. ಅದರು ವ್ಯಕ್ತಿಯ ಮನದಲ್ಲಿನ ಆಂತರಿಕ ಭಾವನೆಗಳನ್ನು ಅಭಿವ್ಯಕ್ತಿಗೊಳಿಸುವ ಒಂದು ಸಾಧನವೆಂದು ಹೇಳಬಹುದು. ಈ ಜಗತ್ತಿನಲ್ಲಿ ಅದೇಷ್ಟೋ ಕಲಾ ಪ್ರೇಮಿಗಳಿಗೆ ನೃತ್ಯವೇ ಜೀವಾಳ. ನೃತ್ಯ ಎನ್ನುವುದು ರಾಜ್ಯದಿಂದ ರಾಜ್ಯಕ್ಕೆ ವಿಭಿನ್ನವಾಗಿರಬಹುದು. ಆದರೆ ಅದರಿಂದ ಹೊರ ಹೊಮ್ಮುವ ಭಾವನೆ ಮತ್ತು ಮನಸ್ಸಿಗೆ ಮುದ ನೀಡುವ ಶಕ್ತಿಯೊಂದೇ ಎಂದು ಹೇಳಬಹುದು. ಈ ಸುಂದರ ಕಲಾ ಪ್ರಕಾರವನ್ನು ಆಚರಿಸಲು ಮತ್ತು ಜಾಗತಿಕವಾಗಿ ಇತರ ನೃತ್ಯ ಪ್ರಕಾರಗಳನ್ನು ಪೋಷಿಸಲು ಪ್ರತಿವರ್ಷ ಏಪ್ರೀಲ್ 29 ರಂದು ಅಂತರಾಷ್ಟ್ರೀಯ ನೃತ್ಯ ದಿನವನ್ನಾಗಿ ಆಚರಿಸಲಾಗುತ್ತದೆ.

ಈ ದಿನದ ಆಚರಣೆಯ ಮೂಲಕ ನಮ್ಮ ಕಲೆ–ಸಂಸ್ಕೃತಿಯನ್ನು ಎತ್ತಿ ಹಿಡಿದು ಗೌರವಿಸಿ, ಉತ್ತೇಜಿಸುವುದು ಮತ್ತು ನೃತ್ಯ ಕಲೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು. ನೃತ್ಯದ ಹಲವಾರು ಪ್ರಕಾರಗಳು, ಅದರ ಮೌಲ್ಯ ಮತ್ತು ನೃತ್ಯದಿಂದ ಆಗುವ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸುವುದು. ಪ್ರಪಂಚದಾದ್ಯಂತ ನಡೆಯುವ ಕಾರ್ಯಕ್ರಮಗಳು ಮತ್ತು ಉತ್ಸವಗಳಲ್ಲಿ ಭಾಗವಹಿಸಿ, ನೃತ್ಯ ಕಲಾವಿದರಿಗೆ ಮತ್ತು ಕಲಾ ಆರಾಧಕ–ರಿಗೆ ಪ್ರೋತ್ಸಾಹ ನೀಡುವುದೇ ಈ ದಿನದ ಪ್ರಮುಖ ಉದ್ಧೇಶವಾಗಿದೆ.

ಜಗತ್ತಿನ ನೃತ್ಯ ಪ್ರಕಾರಗಳಲ್ಲಿ ಜಾಜ್, ಬ್ಯಾಲೆಟ್, ಸಾಲ್ಸಾ, ಪೋಲ್ ಡ್ಯಾನ್ಸಿಂಗ್, ಬಾಲ್ ರೂಂ ನರ್ತನ, ಭರತನಾಟ್ಯಂ, ಕಥಕ್, ಬೆಲ್ಲಿ ಡ್ಯಾನ್ಸ್, ಟ್ಯಾಪ್ ಡ್ಯಾನ್ಸ್, ಹಿಪ್–ಹಾಪ್ ಹೀಗೆ ವಿಶಿಷ್ಟ ಪ್ರಕಾರಗಳಿವೆ. ಅದರಲ್ಲೂ ನಮ್ಮ ಕಲೆ–ಸಂಸ್ಕೃತಿ ಮತ್ತು ಭವ್ಯ ಪರಂಪರೆಯನ್ನು ಪ್ರತಿಬಿಂಬಿಸುವ ಒಡಿಸ್ಸಿ, ಭರತನಾಟ್ಯ, ತಾಂಡವ ನೃತ್ಯ, ಕುಚಿಪುಡಿ, ಕಥಕ್, ಚೌ ನೃತ್ಯ, ಕಥಕ್ಕಳಿ, ಮಣಿಪುರಿ, ಲಾವಣಿ, ಬಿಹೂ ಹೀಗೆ ದೇಶದ ವೈವಿಧ್ಯತೆಯನ್ನು ಅಭಿವ್ಯಕ್ತಗೊಳಿಸುವ ನೃತ್ಯ ಪ್ರಕಾರಗಳು ನಮ್ಮ ದೇಶದಲ್ಲಿವೆ.

**ಆಚರಣೆಯ ಹಿನ್ನೆಲೆ**

ನೃತ್ಯದ ಇತಿಹಾಸವು ಸಾವಿರಾರು ವರ್ಷಗಳಷ್ಟು ಹಿಂದಿನದಾಗಿದ್ದರೂ, ಅಂತರಾಷ್ಟ್ರೀಯ ದಿನಾಚರಣೆಯು ಪ್ರೆಂಚ್‌ನ ಆಧುನಿಕ ಬ್ಯಾಲೆ ನೃತ್ಯದ ಸೃಷ್ಟಿಕರ್ತ ಎಂದೇ ಹೆಸರುವಾಸಿಯಾಗಿದ್ದ ಜೀನ್ ಜಾರ್ಜಸ್ ನೋವರ್‍ರೆ ಅವರ ಜನ್ಮದಿನದ ಸ್ಮರಣಾರ್ಥ ಮೊಟ್ಟಮೊದಲು ಅಧಿಕೃತವಾಗಿ 1982 ರಲ್ಲಿ ಪ್ರಾರಂಭಗೊಂಡಿತು. ಇಂಟರನ್ಯಾಶನಲ್ ಥಿಯೇಟ–ರ್ ಇನಸ್ಟಿಸ್ಯೂಟ್ (ಐ.ಟಿ.ಐ) ನ ಡ್ಯಾನ್ಸ್ ಕಮೀಟಿ ಮತ್ತು ಯನೆಸ್ಕೋ ಪ್ರದರ್ಶನ ಕಲೆಗಳ ಪ್ರಮುಖ ಪಾಲದಾರರಾಗಿ ಈ ದಿನವನ್ನು ಆಚರಿಸಲು ಕರೆ ಕೊಟ್ಟಿತು. ಜನರನ್ನು ಒಟ್ಟುಗೂಡಿಸಲು, ನೃತ್ಯದ ಪ್ರಯೋಜನಗಳನ್ನು ಉತ್ತೇಜಿಸಲು ಮತ್ತು ನೃತ್ಯದಿಂದ ಆನಂದವನ್ನು ಸವಿಯಲು ಈ ಅಂತರಾಷ್ಟ್ರೀಯ ನೃತ್ಯ ದಿನವನ್ನು ವಿಶ್ವದಾದ್ಯಂತ ಏಪ್ರೀಲ್ 29 ರಂದು ಆಚರಿಸಲಾಗುತ್ತಿದೆ. ನೃತ್ಯವು ಕಲಾತ್ಮಕ ಅಭಿವ್ಯಕ್ತಿಯ ಒಂದು ರೂಪವಾಗಿದ್ದು, ವ್ಯಕ್ತಿಯ ಆತಂಕ, ದುಃಖ, ಆಘಾತಕಾರಿ ಸಂಗತಿಯ ನಂತರದ ಒತ್ತಡದ ಅಸ್ವಸ್ಥತೆಯನ್ನು ನಿವಾರಿಸುವ ದಿವ್ಯ ಔಷಧವಾಗಿದೆ ಎಂದು ಹೇಳಬಹುದು. ನೃತ್ಯವು ವೃತ್ತಿಪರ ಕಲಾ ಪ್ರಕಾರವೆಂದು ಇಡೀ ಜಗತ್ತು ಗುರುತಿಸಲು ಮತ್ತು ನೃತ್ಯದ ಮೂಲಕ ಮೋಡಿ ಮಾಡಿ ತಮ್ಮ ಇಡೀ ಜೀವನವನ್ನೇ ನೃತ್ಯಕ್ಕಾಗಿಯೇ ಮುಡಿಪಾಗಿಟ್ಟ ಶ್ರೇಷ್ಠ ನೃತ್ಯ ಸಾಧಕರಿಗೆ ಗೌರವ ನೀಡುವ ದಿನ ಇದಾಗಿದೆ.

ಈ ದಿನದ ಆಚರಣೆಯ ಮೂಲಕ ಜಗತ್ತಿನಾದ್ಯಂತ ನೃತ್ಯದ ಮಹತ್ವ, ವಿವಿಧ ಪ್ರಕಾರಗಳು, ನೃತ್ಯದ ಪ್ರಯೋಜನ ಮತ್ತು ನಮ್ಮ ಕಲೆ–ಸಂಸ್ಕೃತಿ, ಭವ್ಯ ಪರಂಪರೆ ಮತ್ತು ಇತಿಹಾಸವನ್ನು ಪ್ರತಿಬಿಂಬಿಸುವ ನೃತ್ಯಕ್ಕೆ ಹೆಚ್ಚಿನ ಪ್ರಾಧ್ಯಾನ್ಯತೆ ನೀಡಲು ಸೂಕ್ತ ಪ್ರೋತ್ಸಾಹ ಮತ್ತು ಉತ್ತೇಜನ ನೀಡಬೇಕಾಗಿರುವುದು ಇಂದಿನ ಅಗತ್ಯತೆಯಾಗಿದೆ. ನೃತ್ಯದ ಬಗ್ಗೆ ಮಹತ್ವವನ್ನು ಸಾರುತ್ತಾ ಯುವ ಜನಾಂಗವು ನೃತ್ಯ ಒಂದು ಕಲಾರಂಗದ ಪ್ರಮುಖ ಚಟುವಟಿಕೆ ಎನ್ನುವದನ್ನು ಅರಿತುಕೊಂಡು ತನ್ಮೂಲಕ ನೃತ್ಯದಲ್ಲಿ ಸಕ್ರೀಯವಾಗಿ ಭಾಗವಹಿಸುವಂತೆ ಪ್ರೇರೇಪಿಸಬೇಕಾಗಿದೆ.

**2025 ನೇಯ ವರ್ಷದ ಘೋಷವಾಕ್ಯ**

ಜಾಗತಿಕವಾಗಿ ನೃತ್ಯ ಕಲೆಯನ್ನು ಪ್ರಚುರಪಡಿಸಲು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು "ಎಲ್ಲರಿಗಾಗಿ ನೃತ್ಯ" ಎಂಬ ಘೋಷವಾಕ್ಯದೊಂದಿಗೆ ಈ ವರ್ಷದ ಅಂತರಾಷ್ಟ್ರೀಯ ನೃತ್ಯ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಇದು ಸಾಂಸ್ಕೃತಿಕ ಮತ್ತು ಭಾಷೆಯ ಎಲ್ಲ ಗಡಿಗಳನ್ನು ಮೀರಿದ ನೃತ್ಯವು ಸಾರ್ವತ್ರಿಕ ಭಾಷೆಯಾಗಿದೆ. ಜನರನ್ನು ಒಟ್ಟುಗೂಡಿಸುವಲ್ಲಿ ಮತ್ತು ಸಾಂಸ್ಕೃತಿ–ಕ ತಿಳುವಳಿಕೆಯನ್ನು ಉತ್ತೇಜಿಸುವಲ್ಲಿ ಮತ್ತು ಸೃಜನಶೀಲತೆಯನ್ನು ಬೆಳೆಸುವಲ್ಲಿ ನೃತ್ಯದ ಮಹತ್ವವನ್ನು ಎತ್ತಿ ತೋರಿಸುತ್ತದೆ.

**ನೃತ್ಯದ ಮಹತ್ವ**

ನೃತ್ಯ ಕಲೆಯು ಮಾನವನಿಗೆ ತಿಳಿದಿರುವ ಅತ್ಯಂತ ಸಾಂಪ್ರದಾಯಿಕ ಮತ್ತು ದೀರ್ಘಕಾಲಿನ ಮನರಂಜನೆಯ ಮತ್ತು ಸಮುದಾಯಿಕ ಚಟುವಟಿಕೆ. ನೃತ್ಯ ಅಥವಾ ನರ್ತನ ವ್ಯಕ್ತಿಯ ಭಾವನೆಗಳನ್ನು ಪ್ರಕಟಿಸಿ ತನ್ಮಯತೆ ಅನುಭವಿಸುವ ಅನುಭೂತಿಯಾಗಿದೆ. ನೃತ್ಯ ಮನಸ್ಸನ್ನು ಪ್ರಫುಲಿತಗೊಳಿಸುವ, ಮನರಂಜಿಸುವ ಮತ್ತು ಮನಸ್ಸು ಮತ್ತು ಶರೀರವನ್ನು ಆರೋಗ್ಯಕರವಾಗಿಸುವ ಅತ್ಯುತ್ತಮ ಚಟುವಟಿ–ಕೆಯಾಗಿದೆ. ನೃತ್ಯವು ದೈಹಿಕ ಚಟುವಟಿಕೆಗಳನ್ನು ಹೆಚ್ಚಿಸುವ ಮತ್ತು ಮೆದುಳಿನ ಹಿಪ್ಪೋಕ್ಯಾಂಪಸ್ ಎಂಬ ಭಾಗದ ಪರಿಮಾಣ ಕುಗ್ಗುವ ಗತಿಯನ್ನು ಬದಲಿಸುತ್ತದೆ ಅಥವಾ ನಿಧಾನವಾಗಿಸುತ್ತದೆ. ಸಂಗೀತದ ಲಯಬದ್ಧತೆಯೊಂದಿಗೆ ನರ್ತಿಸುವ ವ್ಯಕ್ತಿಯ ಮಾನಸಿಕ ಒತ್ತಡವನ್ನು ಬಿಡುಗಡೆಯಾಗುತ್ತದೆ. ಸಂಗೀತ ಮತ್ತು ನೃತ್ಯದಿಂದ ಮನುಷ್ಯನಲ್ಲಿರುವ ಮಾನಸಿಕ ಖಿನ್ನತೆ, ಆತಂಕ, ಏಕಾಂಗಿತನ ಮತ್ತು ಋಣಾತ್ಮಕ ಮನಸ್ಥಿತಿಯನ್ನು ಹೋಗಲಾಡಿಸಿ ಚೈತನ್ಯವನ್ನು ತುಂಬುತ್ತದೆ ಎಂದು ವೈಜ್ಞಾನಿಕವಾಗಿ ಸಾಬೀತಾಗಿದೆ. ಈ ನೃತ್ಯದಲ್ಲಿ ವಿಶ್ವದಾದ್ಯಂತ ಇರುವ ವೈವಿಧ್ಯಮ ಸಂಸ್ಕೃತಿ, ಆಚರಣೆ, ಪರಂಪರೆ, ಇತಿಹಾಸ ಮತ್ತು ಕಲೆಯು ಅಭಿವ್ಯಕ್ತಿಗೊಳ್ಳುತ್ತದೆ. ಬುಡಕಟ್ಟು ಜನರಿಂದ ಹಿಡಿದು ಸುಸಂಸ್ಕೃತದವರೆಗೂ ನೃತ್ಯವು ತನ್ನದೇ ಆದ ವೈಶಿಷ್ಟ್ಯವನ್ನು ಹೊಂದಿದೆ.

**ಕೊನೆಯ ನುಡಿ**

ಶ್ರೇಷ್ಠ ನೃತ್ಯ ಕಲಾವಿದ ಲ್ಯಾಲ್ ವ್ಯಾಟ್ಸನ್ ಅವರು "ನೃತ್ಯವು ಎಲ್ಲಾ ರೀತಿಯ ಅಭಿವ್ಯಕ್ತಿಗಳಲ್ಲಿ ಅತ್ಯಂತ ಮೂಲಭೂವಾದದ್ದು, ಅದು ಆಂತರಿಕ ಭಾವನೆ ಮತ್ತು ಅನುಭವಕ್ಕೆ ಬಾಹ್ಯ ರೂಪವನ್ನು ಕೊಟ್ಟಷ್ಟು ಬೇರೆ ಯಾವುದೂ ಪರಿಣಾಮಕಾರಿಯಾಗಲು ಸಾಧ್ಯವಿಲ್ಲ" ಎಂದು ಹೇಳಿದ್ದಾರೆ. ನೀಡುವ ಕಲೆಗೆ ಬೆಲೆ ನೀಡಿ, ಗೌರವಿಸುವಂತಾಗಬೇಕು. ಪಾಶ್ಚಾತ್ಯೀಕರಣ ಮತ್ತು ಸಮೂಹ ಮಾಧ್ಯಮಗಳ ಪ್ರಭಾವದಿಂದ ಮರೆಯಾಗುತ್ತಿರುವ ನಮ್ಮ ಈ ನೃತ್ಯ ಕಲೆಗೆ ನಾವೆಲ್ಲರೂ ಅಗತ್ಯ ವೇದಿಕೆ ಕಲ್ಪಿಸಿ, ಸೂಕ್ತ ಪ್ರೋತ್ಸಾಹ ನೀಡಬೇಕು. ನಮ್ಮ ಕಲಾತ್ಮಕವಾದ ನೃತ್ಯ ಸಂಸ್ಕೃತಿಯು ಮುಂದಿನ ಯುವ ಜನಾಂಗಕ್ಕೆ ತಿಳಿಸಿಕೊಟ್ಟು, ಅದನ್ನು ಉಳಿಸಿ–ಬೆಳೆಸುವ ಕಾರ್ಯ ನಡೆಯಬೇಕು. ಇಂದಿನ ಆಧುನಿಕ ಮತ್ತು ಸಂಕೀರ್ಣಮಯವಾದ ಜೀವನದಲ್ಲಿ ಮನದಲ್ಲಿನ ಆತಂಕ, ದುಗುಡ, ಖಿನ್ನತೆ, ಒತ್ತಡವನ್ನು ದೂರಾಗಿಸಿ ಕೊಂಚ ಶಾಂತಿ ಮತ್ತು ನೆಮ್ಮದಿ ನೀಡುತ್ತಾ, ದೇಹ–ಮನಸ್ಸುಗಳ ಆರೋಗ್ಯವನ್ನು ಕಾಪಾಡಲು ನೃತ್ಯವು ಸಹಕಾರಿಯಾಗಿದೆ. ಆದ್ದರಿಂದ ನಾವು ನೃತ್ಯ ಕಲೆಗೆ ಗೌರವಿಸಿ, ಪ್ರೋತ್ಸಾಹಿಸುತ್ತಾ, ಮುಂದಿನ ಪೀಳಿಗೆಗೆ ಅದರ ಮಹತ್ವದ ಸಂದೇಶವನ್ನು ಸಾರಿದರೆ ಮಾತ್ರ ಈ ದಿನದ ಆಚರಣೆಯು ನಿಜಕ್ಕೂ ಅರ್ಥಪೂರ್ಣ ಆಗುವುದರಲ್ಲಿ ಎರಡು ಮಾತಿಲ್ಲ.











ಲೇಖನ

■ ಮಲ್ಲಪ್ಪ. ಸಿ. ಖೊದ್ನಾಪೂರ (ತಿಕೋಟಾ). ವಿಜಯಪುರ

## ಚನ್ನವೀರ ಸ್ವಾಮೀಜಿ ಪ್ರೌಢಶಾಲೆಯ ಉತ್ತಮ ಸಾಧನೆ








■ ಉದಯರಶ್ಮಿ ದಿನಪತ್ರಿಕೆ


ಸಿಂದಗಿ: ಪಟ್ಟಣದ ಪೂಜ್ಯಶ್ರೀ ಚನ್ನವೀರ ಸ್ವಾಮೀಜಿ ಪ್ರೌಢಶಾಲೆಯಲ್ಲಿ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ–1ರಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಶಾಲೆಗೆ ಕೀರ್ತಿ ತಂದಿದ್ದಾರೆ.

ಈ ಪರೀಕ್ಷೆಯಲ್ಲಿ ಮೈಮೂನಾಬೇಗಂ ಕಾಚೂರ ಅವರು 625 ಅಂಕಗಳಿಗೆ 570 (91.20%) ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ರಾಜೇಶ್ವರಿ ಕುರಿ 555 ಅಂಕಗಳು (88.8%) ಪಡೆದು ದ್ವಿತೀಯ ಸ್ಥಾನ ಹಾಗೂ ಸಂಜನಾ ಬಡಿಗೇರ 526 ಅಂಕಗಳು (84.16%) ಪಡೆದು ತೃತೀಯ ಸ್ಥಾನಗಳಿಸಿದ್ದಾರೆ. ಒಟ್ಟು 98 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿತರಾಗಿದ್ದು, ಅದರಲ್ಲಿ 98 ಮಂದಿ ಹಾಜರಾಗಿ 88 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇವರಲ್ಲಿ 2 ಮಂದಿ ಡಿಸ್ಟಿಂಕ್ಷನ್, 30 ಮಂದಿ ಪ್ರಥಮ ದರ್ಜೆ, 23 ಮಂದಿ ದ್ವಿತೀಯ ದರ್ಜೆ ಮತ್ತು 33 ಮಂದಿ ತೃತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ. ಶಾಲೆಯ ಒಟ್ಟಾರೆ ಫಲಿತಾಂಶ 90% ಆಗಿದ್ದು, ಇದು ಸಂತಸದ ವಿಷಯವಾಗಿದೆ.


ಈ ಸಾಧನೆಗೆ ಸಂಸ್ಥೆಯ ಚೇರಮನ್ನರಾದ ಡಾ. ಪ್ರಭುಸಾರಂಗದೇವ ಶಿವಾಚಾರ್ಯರು ಸಾರಂಗಮಠ, ಸಿಂದಗಿ. ಉತ್ತರಾಧಿಕಾರಿ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು, ಆಡಳಿತ ಮಂಡಳಿಯ ನಿರ್ದೇಶಕರು, ಮುಖ್ಯೋಪಾಧ್ಯಾಯ ಎಸ್.ವೈ.ಯರಲಡ್ಡಿ ಹಾಗೂ ಸಿಬ್ಬಂದಿವರ್ಗ ಸಂತೋಷ ವ್ಯಕ್ತಪಡಿಸಿ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

## ಕಗ್ಗೋಡ ಪ್ರಕೃತಿ ಶಾಲಾ ಮಕ್ಕಳ ಉತ್ತಮ ಸಾಧನೆ









■ ಉದಯರಶ್ಮಿ ದಿನಪತ್ರಿಕೆ

ಜಯಪುರ: ತಾಲ್ಲೂಕಿನ ಕಗ್ಗೋಡ ಗ್ರಾಮದ ಬಸವ ಪೀಠ (ರಿ) ಅಡಿಯಲ್ಲಿ ನಡೆಸುತ್ತಿರುವ ಪ್ರಕೃತಿ ಪ್ರೌಢ ಶಾಲೆಯ ವಿಧ್ಯಾರ್ಥಿಗಳು ಎಸ್‌ಎಸ್‌ಎಲ್ಸಿ ಫಲಿತಾಂಶದಲ್ಲಿ ಸಾಧನೆ ಮಾಡಿದ್ದಾರೆ.

ಸುಪ್ರೀತಾ ಇಬ್ರಾಹಿಂಪುರ ಶೇ 97.92, ಪವಿತ್ರಾ ಚವ್ಹಾಣ ಶೇ. 97.92, ರಾಚಣ್ಣಾ ತೇಲಿ ಶೇ. 95.68, ಸಾಕ್ಷಿ ತಳವಾರ ಶೇ.92.96 ಸಾಧನೆಗೈದು ಗ್ರಾಮಕ್ಕೆ ಕೀರ್ತಿ ತಂದಿದ್ದಾರೆ.

ಸಂಸ್ಥೆಯ ಅಧ್ಯಕ್ಷ ಸುಭಾಸ ಥಂಬ, ಮುಖ್ಯೋಪಾಧ್ಯಾಯನಿ ಭಾರತಿ ಥಂಬ, ವಿಧ್ಯಾವತಿ ತೆನಿಹಳ್ಳಿ, ಶಿಕ್ಷಕರು ಹಾಗೂ ಗ್ರಾಮಸ್ಥರು ಅಭಿನಂದಿದ್ದಾರೆ.

## ಬೀದರ್‌ನಲ್ಲಿ ಮೇ 5ರಂದು ಪ್ರತಿಭಾ ಪುರಸ್ಕಾರ

ಬೀದರ್: ಕನ್ನಡ ಸಾಹಿತ್ಯ ಪರಿಷತ್ತಿನ 112 ನೇ ಸಂಸ್ಥಾಪನಾ ದಿನಾಚರಣೆ ನಿಮಿತ್ಯ ಕನ್ನಡ ಮಾಧ್ಯಮದಲ್ಲಿ ಅಭ್ಯಾಸ ಮಾಡಿರುವ ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಪ್ರೋತ್ಸಾಹಿಸಲು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ನಿರ್ಧ–ರಿಸಿದೆ. ಮೇ 5 ರಂದು ನಗರದ ಡಾ. ಚೆನ್ನಬಸವ ಪಟ್ಟದ್ದೇವರು ಜಿಲ್ಲಾ ರಂಗಮಂದಿರದಲ್ಲಿ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆ ನಡೆಯಲಿದ್ದು ಹತ್ತನೆ ತರಗತಿಯಲ್ಲಿ ಶೇ 95 ಕಿಂತ ಹೆಚ್ಚು ಅಂಕ ಪಡೆದ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳು ಮತ್ತು ಕನ್ನಡ ವಿಷಯದಲ್ಲಿ 125 ಕ್ಕೆ 125 ಅಂಕ ಪಡೆದಿರುವ ವಿದ್ಯಾರ್ಥಿಗಳನ್ನು ಹಾಗೂ ಕನ್ನಡ ಭೋದನೆ ಮಾಡಿರುವ ಶಿಕ್ಷಕರನ್ನು ಸನ್ಮಾನಿಸಲಾಗುತ್ತಿದೆ. ಜೊತೆಗೆ ಶೇಕಡಾ 100ರಷ್ಟು ಫಲಿತಾಂಶ ಪಡೆದಿರುವ ಕನ್ನಡ ಮಾಧ್ಯಮದ ಸರಕಾರಿ ಹಾಗೂ ಖಾಸಗಿ ಶಾಲೆಗಳ ಮುಖ್ಯಸ್ಥರನ್ನು, ಶಿಕ್ಷಣ ಸಂಸ್ಥೆಗಳ ಪ್ರಮುಖರನ್ನು ಸಹ ಸನ್ಮಾನಿಸಲಾಗುತ್ತದೆ ಎಂದು ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಸುರೇಶ ಚೆನಶೆಟ್ಟಿ ಅವರು ತಿಳಿಸಿದ್ದಾರೆ.

ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನದ ಸ್ಮರಣಾರ್ಥ ರಾಜ್ಯದ 112 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಾಹೀನ್ ಸಂಸ್ಥೆಯ ಕಾಲೇಜುಗಳಲ್ಲಿ ಎರಡು ವರ್ಷಗಳ ಪಿಯುಸಿ ಶಿಕ್ಷಣವನ್ನು ಸಂಪೂರ್ಣವಾಗಿ ಉಚಿತವಾಗಿ ನೀಡಲು ಶಾಹೀನ್ ಸಂಸ್ಥೆಯ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ಅವರು ಒಪ್ಪಿರುತ್ತಾರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಕಳೆದ 8 ವರ್ಷಗಳಿಂದ ಕನ್ನಡ ಮಾಧ್ಯಮದಲ್ಲಿ ಓದಿ, ಉತ್ತಮ ಫಲಿತಾಂಶ ಪಡೆದಿರುವ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಪ್ರೋತ್ಸಾಹಿಸುತ್ತಿದೆ. ಕನ್ನಡ ಮಾಧ್ಯಮದ ಶಾಲೆಗಳನ್ನು, ತುಂಬುವ ಕೆಲಸವನ್ನು ಸಾಹಿತ್ಯ ಪರಿಷತ್ತು ಮಾಡುತ್ತಿದೆ.




# ಬಹುಮುಖ ವ್ಯಕ್ತಿತ್ವದ ಸೃಜನಶೀಲ ಸಾಹಿತಿ ಡಾ.ಚನ್ನಪ್ಪ ಕಟ್ಟಿ

■ ಉದಯರಶ್ಮಿ ದಿನಪತ್ರಿಕೆ

ಸೃಜನಶೀಲತೆಯೇ ಜೀವಾಳವಾಗಿಸಿಕೊಂಡ ಕನ್ನಡದ ಅಪರೂಪದ ಲೇಖಕರಲ್ಲಿ ಡಾ. ಚನ್ನಪ್ಪ ಕಟ್ಟಿ ಅವರು ಕೂಡಾ ಒಬ್ಬರು.

ಸಿಂದಗಿ ಎಂಬ 'ಅರೆ ನಗರಿ' ಯಲ್ಲಿ ನೆಲೆ ನಿಂತು, ಕಾವ್ಯದ ಮೂಲಕ ಸಾಹಿತ್ಯದ ಯಾನವನ್ನು ಪ್ರಾರಂಭಿಸಿ ಕಥೆ, ವಿಮರ್ಶೆ, ಸಂಶೋಧನೆ, ಜೀವನ ಚರಿತ್ರೆ, ಸಂಪಾದನೆ, ಅನುವಾದ ಹೀಗೆ ಸಾಹಿತ್ಯದ ಹಲವು ಪ್ರಕಾರಗಳಲ್ಲಿ ಅನೂಹ್ಯವಾದ ಕಾರ್ಯ ಮಾಡಿ ಮೌನ ಸಾಧಕರಾದ ಡಾ. ಚನ್ನಪ್ಪ ಕಟ್ಟಿ ಅವರು ಅಪ್ಪಟ ಗ್ರಾಮೀಣ ಪ್ರತಿಭೆ. ತಮ್ಮ ಗ್ರಾಮ ಬದುಕಿನ ಸಶಕ್ತ ಅನುಭವಗಳಿಗೆ ಸಾಹಿತ್ಯದ ಆಧುನಿಕ ಚಿಂತನಾ ದಾ-ರಿಯನ್ನು ತಂದು ಜೋಡಿಸುವ ಮೂಲಕ ಬರಹಕ್ಕೆ ಹೊಸ ಮೆರುಗನ್ನು ತಂದುಕೊಟ್ಟವರು.

**ಕನಕಪ್ಪ ಮತ್ತು ವೆಂಕವ್ವ ನವರ ಸುಪುತ್ರ**

ಸಿಂದಗಿಯ ನಿವಾಸಿಯಾದ ಡಾ. ಚನ್ನಪ್ಪ ಕಟ್ಟಿ ಅವರು ಮೂಲತಃ ಗದಗ ಜಿಲ್ಲೆಯ ರೋಣ ತಾಲೂಕಿನ ಕೊನೆಯ ಸಣ್ಣ ಹಳ್ಳಿ ಹಿರೇಹಾಳ ಗ್ರಾಮದವರು, ಕೃಷಿಯನ್ನೇ ಅವಲಂಬಿಸಿದ ಕನಕಪ್ಪ ಮತ್ತು ವೆಂಕವ್ವ ನವರ ಆರನೆಯ ಮಗನಾಗಿ ಮೇ 1, 1956 ರಲ್ಲಿ ಜನಿಸಿದರು.





**ಸ್ನಾತಕೋತ್ತರ ಪದವಿ**

ಚೆನ್ನಪ್ಪ ಅವರು ಹಿರೇಹಾಳದಲ್ಲಿಯೇ ಪ್ರಾಥಮಿಕ ಶಿಕ್ಷಣ, ಬಾದಾಮಿಯಲ್ಲಿ ಮಾಧ್ಯಮಿಕ ಮತ್ತು ಪದವಿಪೂರ್ವ ಶಿಕ್ಷಣವನ್ನು ಪಡೆದು, ಧಾರವಾಡದ ಕರ್ನಾಟಕ ಕಾಲೇಜಿನಲ್ಲಿ ಪದವಿ, 1979 ರಲ್ಲಿ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದಿಂದ ಇಂಗ್ಲಿಷ್ ಭಾಷಾ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪೂರೈಸಿದರು.

**ಶಿಷ್ಯ ಬಳಗಕ್ಕೆ ಪ್ರೋತ್ಸಾಹ**

ಸ್ನಾತಕೋತ್ತರ ಪದವಿ ಪೂರೈಸಿದ ವರ್ಷವೇ ಚನ್ನಪ್ಪ ಕಟ್ಟಿ ಅವರು ಸಿಂದಗಿಯ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಜಿ. ಪಿ ಪೋರವಾಲ ಕಾಲೇಜಿನಲ್ಲಿ ಇಂಗ್ಲಿಷ್ ಉಪನ್ಯಾಸಕರಾಗಿ ಸೇವೆಯನ್ನು ಪ್ರಾರಂಭಿಸಿದರು. ನಂತರ ಅದೇ ಕಾಲೇಜಿನ ಪ್ರಾಂಶುಪಾಲರಾಗಿ ನಿವೃತ್ತರಾಗಿರುವರು. ಒಟ್ಟು ಮೂವತ್ತೇಳು ವರ್ಷಗಳ ಕಾಲ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ವಿಷಯವನ್ನು ಮನ ಮುಟ್ಟುವಂತೆ ಪಾಠ ಮಾಡಿ, ಸಾವಿರಾರು ವಿದ್ಯಾರ್ಥಿಗಳಿಗೆ ಪೂಜ್ಯ ಗುರುಗಳಾಗಿ, ಮಾರ್ಗದರ್ಶಕರಾಗಿ ಇವತ್ತಿಗೂ ಶಿಷ್ಯ ಬಳಗವನ್ನು ಪ್ರೋತ್ಸಾಹಿಸುತ್ತಲೇ ಸಾಗಿದ್ದಾರೆ.

**ಸುಖೀ ಹಾಗೂ ಸುಂದರ ಕುಟುಂಬ**

ಡಾ. ಚನ್ನಪ್ಪ ಕಟ್ಟಿ ಅವರದ್ದು ಸುಖೀ ಹಾಗೂ ಸುಂದರ ಕುಟುಂಬ, 1985 ರಲ್ಲಿ ಸರೋಜಾ ಅವರನ್ನು ಬಾಳ ಸಂಗಾತಿಯಾಗಿ ಸ್ವೀಕರಿಸಿದರು. ಸಚಿನ್ ಮತ್ತು ಸುಮಾ ಎಂಬ ಇಬ್ಬರು ಮಕ್ಕಳನ್ನು ಪಡೆದ ಚನ್ನಪ್ಪ ಕಟ್ಟಿ ಹಾಗೂ ಸರೋಜಾ ಅವರು ಇಂದು ಅಜ್ಜ-ಅಜ್ಜಿಯಾಗಿ ಮೊಮ್ಮಕ್ಕಳಾದ ಧೃತಿ ಮತ್ತು ಅವ್ಯಕ್ತ ರವರೊಂದಿಗೆ ಕಾಲ ಕಳೆಯುತ್ತಿದ್ದಾರೆ.

**ಸಾಹಿತ್ಯದ ರುಚಿ ತೋರಿಸಿದ ಧಾರವಾಡ ಗಾಳಿ**

ಸಾಹಿತ್ಯದ ವಾತಾವರಣವೇ ಇಲ್ಲದ ಕುಟುಂಬದ ಪರಿಸರದಲ್ಲಿ ಬೆಳೆದ ಬಂದ ಚೆನ್ನಪ್ಪ ಕಟ್ಟಿ ಅವರಿಗೆ ಪಾಠ ಹೇಳಿಕೊಟ್ಟ ಗುರುಗಳು ಸಾಹಿತ್ಯದ ದಾರಿಗೆ ಕರೆದುಕೊಂಡು ಬಂದರೆ, ಅಣ್ಣ ನ ಉಸ್ತುವಾರಿಕೆ ಉನ್ನತ ಶಿಕ್ಷಣ ನೀಡಿತು, ಧಾರವಾಡದ ಗಾಳಿ ಸಾಹಿತ್ಯದ ರುಚಿ ತೋ-ರಿಸಿತು. ಸಿಂದಗಿಯ ಜಾನಪದ ಹಾಗೂ ಸಂಶೋಧನೆಯಲ್ಲಿ ತೊಡಗಿಸಿಕೊಂಡ ಡಾ. ಎಂ ಎಂ ಪಡಶೆಟ್ಟಿ ಅಪರಿಮಿತ ಗೆಳೆಯರಾಗಿ ದೊರೆತು ಅವರ ಸಾಹಿತ್ಯವು ಹುಲುಸಾಗಿ ಬೆಳೆಯಲು ಸಾಧ್ಯವಾಯಿತು.



"ಎರಡು ಸೆಲೆ, ಒಂದು ನೆಲೆ"ಯಿಂದ ಮುನ್ನುಡಿ

ಬಂಡಾಯ ಸಾಹಿತ್ಯ ಚಳವಳಿಯ ಸಂದರ್ಭದಲ್ಲಿ ಗೆಳೆಯರಾದ ನಾಗೇಶ್ ರಾಂಪೂರ ಅವರೊಂದಿಗೆ ಸೇರಿಕೊಂಡು " ಎರಡು ಸೆಲೆ, ಒಂದು ನೆಲೆ " ಕವನ ಸಂಕಲನ ಪ್ರಕಟಿಸಿ ಆಧುನಿಕ ಬದುಕಿಗೆ ಮುಖ ಮಾಡಿರುವ ಮನುಷ್ಯನ ಒಳ ತುಮುಲಗಳನ್ನು ತೆರೆದು ತೋರುವ ಪ್ರಯತ್ನಕ್ಕೆ ಮುನ್ನುಡಿ ಬರೆದರು,

**ಸಾಮಾಜಿಕ ನ್ಯಾಯಕ್ಕಾಗಿ ಹಂಬಲಿಸುವ ಧ್ವನಿ**

" ಇಂಡಿಯಾದಲ್ಲಿ", "ನೆನಪುಗಳು ಸಾಯುವುದಿಲ್ಲ", "ಸೂರ್ಯನಿಗೆ ಸಾವ ನೋಡಲು ಬೇಸರವಿಲ್ಲ", " ಬೇರು - ಚಿಗುರು" , " ಓಡುವ ಪಾದ, ಕಾಡುವ ಸರಪಳಿ" ಕವಿತಾ ಸಂಕಲನಗಳಲ್ಲಿ ' ಸಾಮಾಜಿಕ ನ್ಯಾಯಕ್ಕಾಗಿ ಸದಾ ಹಂಬಲಿಸುವ ತಮ್ಮ ಧ್ವನಿಯನ್ನು ಮಾರ್ದನಿಸುವಂತೆ ಚಿತ್ರಿಸಿರುವುದನ್ನು ಕಾಣಬಹುದಾಗಿದೆ " ಹೇಳಲೇಬೇಕಾದುದನ್ನು ಹೇಳುವ ಸಲುವಾಗಿ, ಹೇಳಲಾಗದನ್ನು ಹೇಳಿಯೇ ತೀರುವ ಸಲುವಾಗಿ " ಬರೆಯುವೆ ಎನ್ನುವ ಅವರ ಮಾತು ಆಪ್ತವೆಸುತ್ತದೆ.

**ಕಾವ್ಯದೊಳಗಿದ್ದು ಕಥೆಯೆಡೆಗೆ**

ಕಾವ್ಯದೊಳಗಿದ್ದು ಕಥೆಯ ಕಡೆಗೆ ಕಣ್ಣು ಹಾಯಿಸಿದ ಕಟ್ಟಿ ಅವರು " ಮುಳುಗಡೆ ಮತ್ತು ಇತರ ಕಥೆಗಳು", " ಬೆಂಕಿ ಇರದ ಬೆಳಕು", ಹಾಗೂ " ಏಕತಾರಿ" ಕಥಾ ಸಂಕಲನಗಳ ಮೂಲಕ ಗ್ರಾಮೀಣ ಪರಿಸರ, ಅಲ್ಲಿನ ಸಂಘರ್ಷ, ಶೋಷಣೆ, ಶ್ರೀಮಂತಯ ಅಮಲು, ಹೆಣ್ಣೆ ಮಕ್ಕಳ ಅಸಹಾಯಕತೆ, ಜಗಳ ಈರ್ಷೆ, ಹಾದರ, ಮಹಿಳೆಯರ ದಿಟ್ಟತನ, ಪ್ರೀತಿ- ಪ್ರಣಯ- ಸಂಬಂಧ ಗಳ ಕುರಿತಾಗಿ ಗಾಢವಾಗಿ ಪರಿಣಾಮ ಬೀರುವ ಹಾಗೆ ಕಾವ್ಯಾತ್ಮಕ ಭಾಷೆಯಲ್ಲಿ ರೂಪಿತಗೊಂಡ ಕಥೆಗಳು ಕನ್ನಡದ ಕಥನ ಲೋಕವನ್ನು ಇನ್ನಷ್ಟು ವಿಸ್ತರಿಸಿ ಮನುಷ್ಯ ಸಂಬಂಧಗಳನ್ನು ಹಾಗೂ ಸಮುದಾಯದ ಧಾರಣ ಶಕ್ತಿಯ ಮೇಲಿರುವ ವಿಶ್ವಾಸ ಮತ್ತು ನಂಬಿಕೆಗಳನ್ನು ಮತ್ತಷ್ಟು ಗಟ್ಟಿಗೊಳಿಸಿವೆ. ಹೀಗಾಗಿ ಕಟ್ಟಿ ಅವರ ಕಥ-'ಗಳನ್ನು ಓದಲು ಓದುಗ ಹಾಗೂ ವಿಮರ್ಶಕ ಒಟ್ಟಿಗೆ ಕಾತುರತೆಯಿಂದ ಕಾಯುವರು.

**ಸಾಹಿತ್ಯ ಮತ್ತು ಸಾಂಸ್ಕೃತಿಕ ತುಡಿತ**

ಸಾಹಿತ್ಯ ಮತ್ತು ಸಾಂಸ್ಕೃತಿಕ ಕುರಿತಾಗಿ ತೀವ್ರ ತುಡಿತ ಹೊಂದಿರುವ ಕಟ್ಟಿ ಅವರು "ಸಾರಣೆ", " ಕುಯಿಲು", " ಶಬ್ದ ಸೋಪಾನ", " ಒಕ್ಕಣೆ", ವಿಮರ್ಶಾ ಕೃತಿಗಳ ಮೂಲಕವೂ ತಮ್ಮ ಓದಿನ ಹರವನ್ನು ಬಿಚ್ಚಿಟ್ಟು, ಕಾವ್ಯ, ಕಥೆಗಳು ಹಾಗೂ ಸೃಜನಶೀಲ ಆಶಯದ ಬರಹದ ಒಳ ಸುಳಿವುಗಳ ಮರ್ಮ ಹೇಗಿರಬೇಕೆಂಬುದರ ಕು-ರಿತಾಗಿ ಚರ್ಚಿಸಿ ಕನ್ನಡ ವಿಮರ್ಶೆಗೆ ಹೊಸತಾದ ದಾ-ರಿಯೊಂದನ್ನು ರೂಪಿಸಿಕೊಟ್ಟಿರುವರು.

"ಚೆನ್ನುಡಿ" - ಮುನ್ನುಡಿ ಬೆನ್ನುಡಿ ಅಭಿಪ್ರಾಯಗಳ ಸಂಕಲನ, " ಕಸವರಮೆಂಬುದು" - ವೈಚಾರಿಕ ಲೇಖನಗಳ ಸಂಕಲನ, " ಬಬಲೇಶ್ವರ ಶಾಂತವೀರ ಪಟ್ಟಾಧ್ಯಕ್ಷರು", " ಇಟಗಿ ಶ್ರೀ ಭೀಮಾಂಬಿಕೆ" - ಜೀವನ ಚರಿತ್ರೆಗಳು, " ನೆನಹು ಮಂದಾರ" - ವ್ಯಕ್ತಿಗಳ ಕಿರು ಜೀವನ ಚರಿತ್ರೆಗಳು ಈ ಕೃತಿಗಳ ಮೂಲಕ ಡಾ. ಚನ್ನಪ್ಪ ಕಟ್ಟಿ ಕನ್ನಡದ ಸಾಂಸ್ಕೃತಿಕ ಲೋಕದ ಕಾಳಜಿಯನ್ನು ಎತ್ತಿ ತೋರಿಸಿದ್ದಾರೆ

**ಸಂಶೋಧನಾ ಕ್ಷೇತ್ರಕ್ಕೂ ಪ್ರವೇಶ**

ಕಾವ್ಯ, ಕಥೆ ಹಾಗೂ ವಿಮರ್ಶಾಯಲ್ಲಿ ದಾಪುಗಾಲು ಇಡುತ್ತಲೇ ಡಾ. ಕಟ್ಟಿ ಅವರು ಸಂಶೋಧನಾ ಕ್ಷೇತ್ರಕ್ಕೂ ತಮ್ಮ " ಅಮೋಘಸಿದ್ದ ಪರಂಪರೆ " ಸಂಶೋಧನಾ ಕೃತಿಯ ಮೂಲಕ ಹೊಸ ಬೆಳಕನ್ನು ತಂದು ಚೆಲ್ಲಿರುವರು. ಸಂಶೋಧಕರಿಗೆ ಮಾದರಿಯಾದ ಈ ಮಹಾಪ್ರಬಂಧ ಅಕ್ಷರ ಇತಿಹಾಸದ ಹೊರಗಿರುವ ಸಿದ್ದರ, ಸಂತರ, ಅನುಭಾವಿಗಳ ಹಾಗೂ ಆರೂಢರ ಪರಂಪರೆಗಳ ಅಧ್ಯಯನಕ್ಕೆ ಮಾರ್ಗ ಆಗಿದೆ

" ಅಮೋಘಸಿದ್ದ ಜನಪದ ಮಹಾಕಾವ್ಯ", " ಕುರುಬ ಮಹಿಳೆ", " ಕುರುಬ ಸಮುದಾಯದ: ವಿದೇಶಿ ವಿದ್ವಾಂಸರ ಅಧ್ಯಯನಗಳು", " ಸೀತಾಳ ಬಿಂದಿಗೆ " ಈ ಕೃತಿಗಳು ಡಾ. ಚನ್ನಪ್ಪ ಕಟ್ಟಿ ಅವರು ಹಾಲುಮತ ಸಂಬಂಧಿ ಕೃತಿಗಳು, ಸಾಹಿತ್ಯ ಸಮ್ಮೇಳನದ, ಸಂಘ ಸಂಸ್ಥೆಗಳ ಸ್ಮರಣಯ ಗ್ರಂಥಗಳನ್ನು ಹಾಗೂ ನಾಡಿನ ಹತ್ತಾರು ಹಿರಿಯ ಲೇಖಕರ ಅಭಿನಂದನಾ ಗ್ರಂಥಗಳಿಗೂ ಕೂಡಾ ಸಂಪಾದಕರಾಗಿ ಅಮೂಲ್ಯವಾದ ಕೃತಿಗಳನ್ನು ಈ ನಾಡಿಗೆ ನೀಡಿರುವುದು ಸ್ಮರಣೀಯವಾಗಿದೆ.

**ಸದಾ ಹೊಸತೇನಾದರೂ ನೀಡಬೇಕೆಂಬ ಹಂಬಲ**

ಸೃಜನಶೀಲತೆಯನ್ನು ಕಾಪಿಟ್ಟುಕೊಂಡ ಡಾ. ಚನ್ನಪ್ಪ ಕಟ್ಟಿ ಅವರಿಗೆ ಹೊಸತೇನಾದರೂ ನೀಡಬೇಕೆಂಬ ಹಂಬಲ ಯಾವತ್ತೂ ಅವರಲ್ಲಿ ಜಂಗಮತ್ವವನ್ನು ಪಡೆದುಕೊಂಡದೆ ಇದಕ್ಕೆ ಸಾಕ್ಷಿ ಎಂಬಂತೆ ಅವರ ಅನುವಾದ ಕೃತಿಗಳಾದ " ಸ್ಕಾರ್ಲೆಟ್ ಪ್ಲೇಗ ( ಕಾದಂಬರಿ), " ಯುದ್ಧ ಕಾಲದ ಹುಡುಗಿಯರು" ( ಕಥಾ ಸಂಕಲನ), " ಮೃತ್ಯು ಮುಟ್ಟದ ಮುನ್ನ "( ಸಾವ ಧೇನಿಸುವ ಕವಿತೆಗಳು), " ಕುವರಿಯಾದೊಡೆ ಕುಂದೇನು?" ( ಏಳು ಏಕಾಂಕ ನಾಟಕಗಳು) ಕೃತಿಗಳು ವೈವಿಧ್ಯಮಯ ಸಾಂಸ್ಕೃತಿಕ ಲೋಕವನ್ನು ಕಟ್ಟಿಕೊಡುವಲ್ಲಿ ಸಫಲತೆಯನ್ನು ಸಾಧಿಸಿವೆ.

**ನೆಲೆ ಪ್ರಕಾಶನ ಸಂಸ್ಥೆ ಸ್ಥಾಪನೆ**

ರಾಜಧಾನಿಯಿಂದ ಐದುನೂರುದ ಮೂವತ್ತು ಹಾಗೂ ಸಾಂಸ್ಕೃತಿಕ ನಗರಿ ಧಾರವಾಡದಿಂದ ಎರಡು ನೂರದಾ ಐವತ್ತು ಕಿಲೋಮೀಟರ್ ದೂರದಲ್ಲಿರುವ ಸಿಂದಗಿ ಪಟ್ಟಣದಲ್ಲಿ ಠಿಕಾಣಿ ಹೂಡಿದ ಚನ್ನಪ್ಪ ಕಟ್ಟಿ ಅವರು ಡಾ. ಎಂ ಎಂ ಪಡಶೆಟ್ಟಿ ಹಾಗೂ ನಾಗೇಶ್ ರಾಂಪೂರ ಅವರೊಂದಿಗೆ ಸೇರಿಕೊಂಡು ಸಿಂದಗಿಯ ಸಾಂಸ್ಕೃತಿಕ ಚಹರೆಯನ್ನು ಬದಲಿಸಿ, ನೆಲೆ ಪ್ರಕಾಶನ ಸಂಸ್ಥೆಯನ್ನು ಹುಟ್ಟು ಹಾಕಿ ಎಪ್ಪತ್ತಕ್ಕೂ ಹೆಚ್ಚು ವೈವಿಧ್ಯಮಯ ಪುಸ್ತಕಗಳನ್ನು ಪ್ರಕಟಿಸಿ, ಕಿರಿಯ ಲೇಖಕರನ್ನು ಸಾಹಿತ್ಯ ಕ್ಷೇತ್ರಕ್ಕೆ ಪರಿಚಯಿಸಿಕೊಡುವಲ್ಲಿ ಸಫಲರಾಗಿದ್ದಾರೆ,

**ಬಹುಮುಖ ವ್ಯಕ್ತಿತ್ವ**

ಬೋಧನೆ, ಬರವಣಿಗೆ ಮತ್ತು ಆಡಳಿತ ವನ್ನು ತಮ್ಮ ಪ್ರಾಮಾಣಿಕ ನಡೆಯ ಮೂಲಕ ನ್ಯಾಯ ಒದಗಿದ ಕಟ್ಟಿ ಅವರದು ಬಹುಮುಖ ವ್ಯಕ್ತಿತ್ವ , ಯಾವಾಗಲೂ ಗೋಜು ಮತ್ತು ಗದ್ದಲಗಳ ಆಚೆ ನಿಂತು ತಮ್ಮ ನಿತಾಂತ ಸಂಯಮದಿಂದ ಪ್ರತಿಯೊಂದನ್ನು ಅವಲೋಕಿಸಿ ನಿರ್ಣಯಿಸುವ ಇವರ ನಡೆ ನಿಧಾನವಾದರೂ ಪ್ರಧಾನವಾಗಿದೆ.

**ನಲವತ್ತಕ್ಕೂ ಹೆಚ್ಚು ಕೃತಿಗಳ ರಚನೆ**

ಡಾ. ಚನ್ನಪ್ಪ ಕಟ್ಟಿ ಅವರು ಇದುವರೆಗೂ ಸುಮಾರು ನಲವತ್ತಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದು ಎಲ್ಲಾ ಕೃತಿಗಳು ಕನ್ನಡ ನಾಡಿಗೆ ವೈವಿಧ್ಯಮಯ ಸಾಂಸ್ಕೃತಿಕ ಲೋಕವನ್ನು ಪರಿಚಯಿಸಿಕೊಟ್ಟಿವೆ, ಡಾ. ಕಟ್ಟಿ ಅವರು ತಮ್ಮ ಕಾವ್ಯ ಭಾಷೆಯ ಮೂಲಕ ಸಾಹಿತ್ಯ ಕ್ಷೇತ್ರಕ್ಕೆ ಹೊಸ ಧ್ವನಿಯೊಂದನ್ನು ತಂದು ಸೇರಿಸಿದ್ದಾರೆ ಎಂದು ವಿಮರ್ಶಕರು ಗುರುತಿಸಿದ್ದಾರೆ.

ಒಟ್ಟಾರೆ ಡಾ. ಚನ್ನಪ್ಪ ಕಟ್ಟಿ ಅವರ ಬದುಕು, ಬರಹ ಮತ್ತು ಆಡಳಿತದ ಹರಿವು ಕರ್ನಾಟಕ ಸಾಹಿತ್ಯ ಮತ್ತು ಸಾಂಸ್ಕೃತಿಕ ಲೋಕವನ್ನು ಸಮೃದ್ಧಗೊಳಿಸಿವೆ, ಇವರ ಚಿಂತನೆ ಮತ್ತು ವಿಚಾರಗಳು, ಕಾರ್ಯವೈಖರಿ ಹೊಸ ಬರಹಗಾರರಿಗೆ ಹೊಸ ವಿವೇಕವನ್ನು ತುಂಬುವ ಈ ಸಂದರ್ಭದಲ್ಲಿಯೇ ಅವರಿಗೀಗ ಎಪ್ಪತ್ತು ವರ್ಷ. ಈ ಸಂದರ್ಭದಲ್ಲಿ ಅವರ ಶಿಷ್ಯ ಬಳಗ ಮತ್ತು ಅಭಿಮಾನಿಗಳು ಸೇರಿ ಸಿಂದಗಿಯಲ್ಲಿ ಇದೇ ಮೇ 01 ನೇ ತಾರೀಖಿನಂದು "ನೆಲೆ" ಎನ್ನುವ ಅಭಿನಂದನಾ ಗ್ರಂಥ ಅರ್ಪಿಸುವ ಮೂಲಕ ಅವರ ಎಪ್ಪತ್ತನೇಯ ವರ್ಷದ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚ-ರಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ.

**ಮೇ.01 ಸಾಹಿತಿ ಡಾ.ಡಾ.ಚನ್ನಪ್ಪ ಕಟ್ಟಿ ಜನ್ಮದಿನ ಈ ಸಂದರ್ಭದಲ್ಲಿ ಅವರ ಶಿಷ್ಯ ಬಳಗ ಮತ್ತು ಅಭಿಮಾನಿಗಳು ಸೇರಿ ಸಿಂದಗಿಯಲ್ಲಿ ಇದೇ ಮೇ .01 ಶುಕ್ರವಾರ ದಂದು "ನೆಲೆ" ಎನ್ನುವ ಅಭಿನಂದನಾ ಗ್ರಂಥ ಅರ್ಪಿಸುವ ಮೂಲಕ ಅವರ 70 ನೇ ವರ್ಷದ ಜನ್ಮದಿನ ಅರ್ಥಪೂರ್ಣವಾಗಿಸಲಿದ್ದಾರೆ. ಆ ಪ್ರಯುಕ್ತ ಈ ವಿಶೇಷ ಲೇಖನ**

## ಪದವಿ ಗೌರವ



**ಡಾ.ಚನ್ನಪ್ಪ ಕಟ್ಟಿ ಅವರು, ಸಿಂದಗಿ ನೆಲೆ ಪ್ರಕಾಶನ ಸಂಸ್ಥೆಯ ಸಂಸ್ಥಾಪಕ ಸದಸ್ಯರಾಗಿ , ವಿಜಯಪುರದ ಕಲಬುರಗಿ ಫೌಂಡೇಶನ್ ದ ಸದಸ್ಯ, ಹಲಸಂಗಿ ಪ್ರತಿಷ್ಠಾನದ ಸದಸ್ಯ, ಕೇಂದ್ರ ಸಾಹಿತ್ಯ ಅಕಾಡೆಮಿಯ ಕನ್ನಡ ಸಲಹಾ ಸಮಿತಿಯ ಸದಸ್ಯರಾಗಿ ಕನ್ನಡ ಭಾಷೆಯನ್ನು ನವೀನವಾಗಿ ಕಟ್ಟುವಲ್ಲಿ ನಿರಂತರತೆಯನ್ನು ಕಾಯ್ದುಕೊಂಡಿರುವರು ಎಲ್ಲಕ್ಕೂ ಮಣಿಮುಕುಟದಂತೆ ಸದ್ಯ ಕರ್ನಾಟಕದ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಅಧ್ಯಕ್ಷರಾಗಿ ಬೆಂಗಳೂರು ವಲಯದಲ್ಲಿ ಉತ್ತರ ಕರ್ನಾಟಕದ ಸಿಂದಗಿಯ ಸೊಗಡನ್ನು ತಮ್ಮ ಬರಹ ಮಾತು ಮತ್ತು ಆಡಳಿತದ ಮೂಲಕ ಸಾದರ ಪಡಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ.**



## ಪ್ರಶಸ್ತಿ - ಪುರಸ್ಕಾರ



**ಡಾ.ಚನ್ನಪ್ಪ ಕಟ್ಟಿ ಅವರ ಸಾಹಿತ್ಯದ ಈ ಸುದೀರ್ಘ ಪಯಣದ ಹಾದಿಯಲ್ಲಿ ಕಟ್ಟಿ ಅವರನ್ನು - ಜಯತೀರ್ಥ ರಾಜಪುರೋಹಿತ ದತ್ತಿನಿಧಿ ಸಣ್ಣ ಕಥಾ ಸ್ಪರ್ಧೆಯಲ್ಲಿ ಚಿನ್ನದ ಪದಕ, ಸಂಕ್ರಮಣ ಕಾವ್ಯ ಪ್ರಶಸ್ತಿ, ಎಚ್ ಎಂ ಟಿ ಕಥಾ ಪ್ರಶಸ್ತಿ, ಮಲ್ಲೇಪುರಂ ಜಿ. ವೆಂಕಟೇಶ ಸಾಂಸ್ಕೃತಿಕ ಪ್ರತಿಷ್ಠಾನದ ಬಿ. ಶ್ಯಾಮಸುಂದರ ಪ್ರಶಸ್ತಿ, ರತ್ನಾಕರವರ್ಣಿ - ಮುದ್ದಣ ಕಾವ್ಯ ಪ್ರಶಸ್ತಿ, ಅಮ್ಮ ಪ್ರಶಸ್ತಿ, ಬೆಟದೂರು ಅಮರಮ್ಮ ಚೆನ್ನಬಸಪ್ಪ ಪ್ರಶಸ್ತಿ, ಡಾ. ಬೆಸಗರಹಳ್ಳಿ ರಾಮಣ್ಣ ಕಥಾ ಪ್ರಶಸ್ತಿ, ಕರ್ನಾಟಕ ಜಾನಪದ ಅಕಾಡೆಮಿಯ ಪುಸ್ತಕ ಬಹುಮಾನ, ಡಾ. ಬಸವರಾಜ ಕಟ್ಟಿಮನಿ ಕಥಾ ಪ್ರಶಸ್ತಿ, ಸ್ವಾಭಿಮಾನಿ ಕನ್ನಡ ಬಳಗ ಪುಸ್ತಕ ಬಹುಮಾನ, ಬೆರಗು ಸಮಗ್ರ ಸಾಹಿತ್ಯ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಪುಸ್ತಕ ಬಹುಮಾನ, "ಊರ್ಧರೇತ" ಕಿರು ಚಲನಚಿತ್ರದ ಕಥೆಗೆ ಉತ್ತರ ಕರ್ನಾಟಕ ಇಂಟರ್ ನ್ಯಾಷನಲ್ ಶಾರ್ಟ್ ಫಿಲ್ಮ್ ಫೆಸ್ಟಿವಲ್ 2022 ಟೆಲೆ ಫಿಲ್ಮ್ ಬೆಸ್ಟ್ ಸ್ಟೋರಿ ಅವಾರ್ಡ್ ಗಳು ಹುಡುಕಿಕೊಂಡು ಬಂದಿವೆ.**



ಲೇಖನ
■ ಮನು ಪತ್ತಾರ, ಕಲಕೇರಿ
ವಿಜಯಪುರ

---

# ವಿವೇಕ್ ಇಂಟರ್ನ್ಯಾಷನಲ್ ಪಬ್ಲಿಕ್ ಶಾಲೆಗೆ ಶೇ.100 ಫಲಿತಾಂಶ







■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ನಗರದ ಬಂದಾಳ ರಸ್ತೆಯಲ್ಲಿರುವ * ವಿವೇಕ್ ಇಂಟರ್ನ್ಯಾಷನಲ್ ಪಬ್ಲಿಕ್ ಸ್ಕೂಲಿನ ಎಸ್. ಎಸ್.ಎಲ್.ಸಿ ಫಲಿತಾಂಶ ಶೇಕಡ 100 ರಷ್ಟು ಆಗಿದೆ.

ಒಟ್ಟು 13 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, ಅವರಲ್ಲಿ ಕುಮಾರಿ ಲಕ್ಷ್ಮಿ ಸುಗಯ್ಗೋಳ 625 ಕ್ಕೆ 575,92% ಅಂಕ ಪಡೆದು ಪ್ರಥಮ ಸ್ಥಾನ ಪಡೆದರೆ, ಕುಮಾರ ಪ್ರವೀಣ ಅಗಸರ 600ಕ್ಕೆ 568, 91% ಅಂಕ ಪಡೆದು ಶಾಲೆಗೆ ದ್ವಿತೀಯ ಸ್ಥಾನ ಪಡೆದಿದ್ದಾನೆ. ಕುಮಾರ ಪೃಥ್ವಿ ಲೋಣಿ 600ಕ್ಕೆ 566, 90.56% ಅಂಕ ಪಡೆದು ಶಾಲೆಗೆ ತೃತೀಯ ಸ್ಥಾನ ಪಡೆದಿದ್ದಾನೆ. ಕುಮಾರ ಸಿದ್ಧಾರೂಡ 600ಕ್ಕೆ 555,88.8%, ಸ್ನೇಹಾ ಹೆರೂರ 600ಕ್ಕೆ 553,88.48%, ಭೂಮಿಕಾ ಹಳಿಮನಿ 600ಕ್ಕೆ 549, 87.84%, ಪ್ರಮೋದ್ ಭಾಸಗಿ 600 ಕ್ಕೆ 537, 85.92%, ಶ್ರೀನಿಧಿ ಕುಲಕರ್ಣಿ 600 ಕ್ಕೆ 529,85% ಅಂಕಗಳನ್ನು ಪಡೆದಿದ್ದಾರೆ. ಒಟ್ಟು 8 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ( ಡಿಸ್ಟಿಂಕ್ಷನ್) ಪಾಸಾದರೆ, ಆದಿತ್ಯ ಅರಳಗುಂಡಗಿ 498, ಆನಂದ ಮಾದರ್ 475, ಕಾವ್ಯ ಕತ್ತಿ 468, ಅರ್ಪಿತಾ ಬಿರಾದಾರ 430, ಮಹಮದ್ ಕೈಫ್ 396 ಅಂಕಗಳನ್ನು ಪಡೆದಿದ್ದಾರೆ 5 ವಿದ್ಯಾರ್ಥಿಗಳು ಉನ್ನತ ಶ್ರೇಣಿ( ಫಸ್ಟ್ ಕ್ಲಾಸ್ ) ಯಲ್ಲಿ ಪಾಸಾಗಿದ್ದಾರೆ. ಒಟ್ಟು ಶಾಲೆಯ ಫಲಿತಾಂಶ 100ಕ್ಕೆ 100ರಷ್ಟು ಆಗಿದೆ ಎಂದು ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ನೀಲಮ್ಮ ಹೆಗ್ಗನದೊಡ್ಡಿ ಮತ್ತು ಶಾಲೆಯ ಶಿಕ್ಷಕ ವೃಂದ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಹೃತ್ಪೂರ್ವಕವಾಗಿ ಅಭಿನಂದಿಸಿದ್ದಾರೆ.

# ಬೀದರದಲ್ಲಿ ವಾಸವಿ ಕನ್ಯಕಾ ಪರಮೇಶ್ವರಿ ದೇವಿಯ ಭವ್ಯ ಜನ್ಮೋತ್ಸವ

ಬೀದರ್: ನಗರದ ಚೌಬಾರಾ ಹತ್ತಿರದ ಪಾಂಡುರಂಗ ದೇವಸ್ಥಾನದಲ್ಲಿ ಆರ್ಯ ವೈಶ್ಯ ಸಂಘದ ವತಿಯಿಂದ ಪ್ರತಿವರ್ಷದಂತೆ ಈ ವರ್ಷವೂ ಶ್ರೀ ವಾಸವಿ ಕನ್ಯಕಾ ಪರಮೇಶ್ವರಿ ದೇವಿಯ ಜನ್ಮೋತ್ಸವವನ್ನು ಭಕ್ತಿಭಾವ, ಶ್ರದ್ಧೆ ಹಾಗೂ ಸಂಭ್ರಮದಿಂದ ಜರುಗಿತು.


ಬೆಳಿಗ್ಗೆ ಮುಂಜಾನೆಯಿಂದಲೇ ದೇವಸ್ಥಾನದಲ್ಲಿ ಭಕ್ತರ ಸಂಚಾರ ಜೋರಾಗಿದ್ದು, ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು. ಜನ್ಮೋತ್ಸವದ ಅಂಗವಾಗಿ ಶ್ರೀ ವಾಸವಿ ಮಾತೆಯ ಅಭಿಷೇಕ, ಅಲಂಕಾರ, ಕುಂಕುಮಾರ್ಚನೆ ಹಾಗೂ ವಿಶೇಷ ಅರ್ಚನೆಗಳು ನಡೆದವು. ದೇವಿಯ ಮಂಗಳಮಯ ದರ್ಶನಕ್ಕಾಗಿ ಆಗಮಿಸಿದ ಭಕ್ತರು ಪೂಜೆಯಲ್ಲಿ ಪಾಲ್ಗೊಂಡು ಆಶೀರ್ವಾದ ಪಡೆದರು.


ಮಧ್ಯಾಹ್ನದ ವೇಳೆಗೆ ಅತ್ಯಂತ ಭಾವಪೂರ್ಣವಾಗಿ ಶ್ರೀ ಮಾತಾ ವಾಸವಿ ದೇವಿಯ ತೊಟ್ಟಿಲು ಕಾರ್ಯಕ್ರಮ ಜರುಗಿತು. ಈ ಸಂದರ್ಭದಲ್ಲಿ ಮಹಿಳೆಯರು ಹಾಗೂ ಭಕ್ತಾದಿಗಳು ಭಕ್ತಿಗೀತೆಗಳನ್ನು ಹಾಡಿ ದೇವಿಯ ಜನ್ಮೋತ್ಸವವನ್ನು ಸಂಭ್ರಮಿಸಿದರು. ಬಳಿಕ ಆಗಮಿಸಿದ ಎಲ್ಲ ಭಕ್ತ-ರಿಗೆ ಪ್ರಸಾದ ವಿತರಣೆ ಮಾಡಲಾಯಿತು. ಜನ್ಮೋತ್ಸವದ ಪ್ರಮುಖ ಆಕರ್ಷಣೆಯಾಗಿ ಬೃಹತ್ ಮಹಾಲಕ್ಷ್ಮಿ ಹವನ ಪೂಜೆ ಆಯೋಜಿಸಲಾಗಿ-ತ್ತು. ಈ ಮಹತ್ವದ ಹವನದಲ್ಲಿ 99 ದಂಪತಿಗಳು ಭಕ್ತಿಪೂರ್ವಕವಾಗಿ ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿದರು. ದೇವಸ್ಥಾನದ ಪೂಜಾರಿ ಶ್ರೀ ಗೋವಿಂದ ಮಹಾರಾಜ ಅವರ ನೇತೃತ್ವದಲ್ಲಿ 15 ಅರ್ಚಕರ ತಂಡವು ವೇದಮಂತ್ರೋಚ್ಚಾರಣೆಯೊಂದಿಗೆ ಪೂಜೆ ಹಾಗೂ ಹವನ ಕಾರ್ಯಕ್ರಮವನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿತು. ಹವನದ ವೇಳೆ ದೇವಸ್ಥಾನ ಆವರಣವು ಆಧ್ಯಾತ್ಮಿಕ ವಾತಾವರಣದಿಂದ ತುಂಬಿ ತುಳುಕಿತು.

ಸಂಜೆ ದೇವಸ್ಥಾನದಿಂದ ಭಕ್ತಿಭರಿತ ಹಾಗೂ ಭವ್ಯ ಮೆರವಣಿಗೆ ಪ್ರಾರಂಭಗೊಂಡಿತು.

# ಯಾಳವಾರ ಸರ್ಕಾರಿ ಪ್ರೌಢಶಾಲೆ ಉತ್ತಮ ಸಾಧನೆ







■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ತಾಲ್ಲೂಕಿನ ಯಾಳವಾರ ಗ್ರಾಮದ ಸೋಮೇಶ್ವರ ವಿದ್ಯಾವರ್ಧಕ ಸಂಘದ ಪ್ರೌಢಶಾಲೆ ವಿದ್ಯಾರ್ಥಿಗಳು ಎಸ್‌ಎಸ್-ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ.

ಪರೀಕ್ಷೆಗೆ ಕುಳಿತ 71 ವಿದ್ಯಾರ್ಥಿಗಳಲ್ಲಿ ಎಲ್ಲಾ 70 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಪ್ರಥಮ ಸ್ಥಾನವನ್ನು ಲಕ್ಷ್ಮೀ ದೇಸಾಯಿ ಶೇ 96.64, ದ್ವಿತೀಯ ಸ್ಥಾನವನ್ನು ಕಸ್ತೂರಿಬಾಯಿ ಇಬ್ರಾಹಿಂಪೂರ ಶೇ 93.92 ತೃತೀಯ ಸ್ಥಾನವನ್ನು ಕೀರ್ತಿ ಹುಣಶ್ಯಾಳ ಶೇ 91.68 ಫಲಿತಾಂಶ ಪಡೆದಿದ್ದಾರೆ.

ವಿದ್ಯಾರ್ಥಿ,ವಿದ್ಯಾರ್ಥಿನಿಯರ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ರಾಜುಗೌಡ ನಾಡಗೌಡ್ರ, ಮುಖ್ಯಶಿಕ್ಷಕ ಕೆ.ಆಯ್. ಹೊಸಮನಿ ಹರ್ಷ ವ್ಯಕ್ತಪಡಿಸಿದ್ದಾರೆ.

# ಮರಾಠಾ ಸಮಾಜದಿಂದ ಅಂಬೇಡ್ಕರ್ ಜಯಂತ್ಯುತ್ಸವ

ಬೀದರ್: ಈ ತಿಂಗಳ 29ರಂದು ಸಾಯಂಕಾಲ 5 ಗಂಟೆಗೆ ನಗರದ ಅಂಬೇಡ್ಕರ್ ಹಾಗೂ ಛತ್ರಪತಿ ಶಿವಾಜಿ ಮಹಾರಾಜ ವೃತ್ತದ ಮಧ್ಯದಲ್ಲಿನ ರಸ್ತೆಯಲ್ಲಿ ಬೃಹತ್ ವೇದಿಕೆ ನಿರ್ಮಿಸಿ ಅಲ್ಲಿ ಸಂವಿಧಾನ ಶಿಲ್ಪಿ ಡಾ.ಭೀಮರಾವ ಅಂಬೇಡ್ಕರ್ ಅವರ ಜಯಂತ್ಯೋತ್ಸವ ಸಂಭ್ರಮ ಹಾಗೂ ಅರ್ಥಪೂರ್ಣವಾಗಿ ಆಚ-'ರಿಸಲಾಗುವುದೆಂದು ಸಮಾಜದ ಪೂಜ್ಯರಾದ ದಾದಾ ಮಹಾರಾಜ್ ನಗರಕರ್ ಅವರು ತಿಳಿಸಿದರು.

# ವಿಜಯಪುರಕ್ಕೆ ಮೇ.2 ರಂದು ರಾಜ್ಯ ಮಾಹಿತಿ ಆಯುಕ್ತರ ಪ್ರವಾಸ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಜ್ಯ ಮಾಹಿತಿ ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ ಮತ್ತು ರಾಜಶೇಖರ ಎಸ್. ಅವರು ಮೇ 2 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಜಿಲ್ಲೆಯಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಅಂದು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬೆಳಗ್ಗೆ 11 ರಿಂದ 1 ಗಂಟೆಯವರೆಗೆ ನಡೆಯಲಿರುವ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸುವರು.

ಜಿಲ್ಲೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಇಲಾಖೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಜಾಗೃತಿ ಕಾರ್ಯಕ್ರಮ ನಡಯಲಿದೆ.

ಹಾಗಾಗಿ ಜಿಲ್ಲೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ತರಬೇತಿ ಕಾರ್ಯಾಗಾರಕ್ಕೆ ಕಡ್ಡಾಯವಾಗಿ ಹಾಜರಾಗಬೇಕು.ಬದಲಿಗೆ ಯಾವುದೇ ಪ್ರತಿನಿಧಿ ಕಳುಹಿಸದೇ ತಾವುಗಳು ಖುದ್ದಾಗಿ ಹಾಜರಿರಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಡಾ. ಔದ್ರಾಮ ತಿಳಿಸಿದ್ದಾರೆ.

# ಪಡಿತರ ದುರುಪಯೋಗಕ್ಕೆ ಕಠಿಣ ಕ್ರಮ : ಕಂಕಣವಾಡಿ

## 6 ತಿಂಗಳು ಚೀಟಿ ಅಮಾನತ್ತು । ಬಾಗಲಕೋಟೆ ಜಿಲ್ಲಾಡಳಿತ ಎಚ್ಚರಿಕೆ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ:ಆಹಾರ,ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ (ಪಿಡಿಎಸ್) ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿದಾರರಿಗೆ ಎನ್‌ಎಫ್‌ಎಸ್‌ಎ ಹಾಗೂ ಅನ್ನಭಾಗ್ಯ ಯೋಜನೆಗಳಡಿ ಉಚಿತ ಆಹಾರಧಾನ್ಯ ವಿತರಣೆ ನಡೆಯುತ್ತಿದೆ. ಆದರೆ, ಕೆಲವರು ತಮ್ಮ ಪಾಲಿನ ಪಡಿತರವನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ವರದಿಗಳು ಕೇಳಿಬರುತ್ತಿರುವ ಹಿನ್ನೆಲೆ ಜಿಲ್ಲಾಡಳಿತ ಕಠಿಣ ಎಚ್ಚರಿಕೆ ನೀಡಿದೆ.

ಯಾವುದೇ ಪಡಿತರ ಚೀಟಿದಾರ ಅಥವಾ ಅದರ ಸದಸ್ಯರು ತಮಗೆ ಹಂಚಿಕೆಯಾದ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಪತ್ತೆಯಾದರೆ, ಅಂತಹವರ ಪಡಿತರ ಚೀಟಿಯನ್ನು 6 ತಿಂಗಳ ಅವಧಿಗೆ ಅಮಾನತ್ತು ಪಡಿಸಲಾಗುವುದು. ಇದಲ್ಲದೆ, ಅವರು ಮಾರಾಟ ಮಾಡಿದ ಆಹಾರಧಾನ್ಯದ ಪ್ರಮಾಣಕ್ಕೆ ಅನುಗುಣವಾಗಿ ಮುಕ್ತ ಮಾರುಕಟ್ಟೆ ದರದಂತೆ ದಂಡ ವಿಧಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಜಂಟಿ ನಿರ್ದೇಶಕರು ಶ್ರೀಶೈಲ ಕಂಕಣವಾಡಿ ಅವರು, ಪಡಿತರವು ಬಡ ಮತ್ತು ಅರ್ಹ ಫಲಾನುಭವಿಗಳಿಗೆ ಸರ್ಕಾರದಿಂದ ನೀಡುವ ಮಹತ್ವದ ಸೌಲಭ್ಯವಾಗಿದ್ದು, ಇದರ ದುರುಪಯೋಗ ತಡೆಯುವುದು ಅತ್ಯವಶ್ಯಕವಾಗಿದೆ ಎಂದು ಹೇಳಿದರು.

ಪಡಿತರವನ್ನು ಕಾಳಸಂತೆಗೆ ಮಾರಾಟ ಮಾಡುವಂತಹ ಅನಧಿಕೃತ ಚಟುವಟಿಕೆಗಳಲ್ಲಿ ತೊಡಗದಂತೆ ಸಾರ್ವಜನಿಕರು ಜಾಗರೂಕರಾಗಿರಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಜಿಲ್ಲೆಯ ಎಲ್ಲಾ ಪಡಿತರ ಚೀಟಿದಾರರು ಸರ್ಕಾರದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಯಾವುದೇ ಉಲ್ಲಂಘನೆ ಕಂಡುಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದಾಗಿ ಆಹಾರ ಇಲಾಖೆ ಎಚ್ಚರಿಕೆ ನೀಡಿದೆ.

# ಫಲಿತಾಂಶದಲ್ಲಿ ಎಡವಟ್ಟು: 86 ಅಂಕದ ಬದಲು 45 ನಮೂದು

■ ಉದಯರಶ್ಮಿ ದಿನಪತ್ರಿಕೆ



ಆಲಮಟ್ಟಿ: ಸಮೀಪದ ವಂದಾಲ ಗ್ರಾಮದ ಶಾಕಂಬರಿ ಪ್ರೌಢಶಾಲೆಯ ವಿದ್ಯಾರ್ಥಿಯೊಬ್ಬನ ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಅಂಕ ತಪ್ಪಾಗಿ ನಮೂದಾಗಿದ್ದು, ವಿದ್ಯಾರ್ಥಿಗೆ ಅನ್ಯಾಯವಾಗಿದೆ.

ಗ್ರಾಮದ ವಿದ್ಯಾರ್ಥಿ ಸಂತೋಷ ರಾಘವೇಂದ್ರ ಖೇಡದ 2025–26ನೇ ಸಾಲಿನ ಪರೀಕ್ಷೆಯಲ್ಲಿ ವಿಜ್ಞಾನ ವಿಷಯದಲ್ಲಿ 80ಕ್ಕೆ 66 ಅಂಕ ಪಡೆದಿದ್ದಾನೆ. ಇದು ಉತ್ತರ ಪತ್ರಿಕೆಯ ಝೆರಾಕ್ಸ್ ಪ್ರತಿ ಪಡೆದಾಗ ತಿಳಿದುಬಂದಿದೆ.

ಆದರೆ ಏಪ್ರಿಲ್ 23ರಂದು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟವಾದ ಅಂಕಪಟ್ಟಿಯಲ್ಲಿ ಸಂತೋಷಗೆ ವಿಜ್ಞಾನ ವಿಷಯದಲ್ಲಿ ಕೇವಲ 25 ಅಂಕ ಮಾತ್ರ ನಮೂದಾಗಿದೆ.

ಇದರಿಂದ ನೊಂದ ವಿದ್ಯಾರ್ಥಿ, ಉತ್ತರ ಪತ್ರಿಕೆಯ ಪ್ರತಿ ಕೋರಿ ಪರೀಕ್ಷಾ ಮಂಡಳಿಗೆ ಅರ್ಜಿ ಸಲ್ಲಿಸಿದ್ದ. ಪ್ರತಿ ಕೈಸೇರಿದಾಗ ಅಸಲಿ ಎಡವಟ್ಟು ಬಯಲಾಗಿದೆ.

"ಉತ್ತರ ಪತ್ರಿಕೆಯ ಮುಖಪುಟದಲ್ಲಿ ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ ಎಂದು ಮೂರು ವಿಭಾಗಗಳಿಗೆ ಪ್ರತ್ಯೇಕ ಅಂಕ ನಮೂದಿಸಿ ಒಟ್ಟು ಮೊತ್ತ ಹಾಕಬೇಕು. ಇಲ್ಲಿ ಮೌಲ್ಯಮಾಪಕರು ಅಕ್ಷರದಲ್ಲಿ 66 ಅಂಕ ಎಂದು ಬರೆದಿದ್ದಾರೆ. ಆದರೆ ಗಣಕಯಂತ್ರದಲ್ಲಿ ದಾಖಲಿಸುವಾಗ ಜೀವಶಾಸ್ತ್ರ ವಿಭಾಗದ 25 ಅಂಕವನ್ನು ಮಾತ್ರ ನಮೂದಿಸಿದ್ದಾರೆ" ಎಂದು ಶಾಲೆಯ ಮುಖ್ಯ ಶಿಕ್ಷಕ ಆನಂದ ಕಂಠಿ ತಿಳಿಸಿದರು.

ವಾಸ್ತವವಾಗಿ 66 ಅಂಕದ ಜೊತೆಗೆ ಆಂತರಿಕ ಮೌಲ್ಯಮಾಪನದ 20 ಅಂಕ ಸೇರಿದರೆ ವಿಜ್ಞಾನಕ್ಕೆ ವಿದ್ಯಾರ್ಥಿ ಪಡೆಯಬೇಕಾದ ಒಟ್ಟು ಅಂಕ 100ಕ್ಕೆ 86. ಆದರೆ ಈಗ ಆಂತರಿಕ ಅಂಕ ಸೇರಿ ಕೇವಲ 45 ಅಂಕ ಬಂದಿದೆ. ಇದರಿಂದ ವಿದ್ಯಾರ್ಥಿಗೆ 41 ಅಂಕ ಕಡಿಮೆಯಾಗಿದ್ದು, ಒಟ್ಟಾರೆ ಫಲಿತಾಂಶದಲ್ಲಿ ಶೇ.6.56 ಅಂಕಗಳ ವ್ಯತ್ಯಾಸವಾಗಲಿದೆ.

"ಮೌಲ್ಯಮಾಪಕರು ಮಾಡಿದ ಎಡವಟ್ಟಿನಿಂದ ನಾನು ಹೆಚ್ಚು ಅಂಕ ಪಡೆದರೂ ಕಡಿಮೆ ಅಂಕ ಬಂದಿದೆ. ಪರೀಕ್ಷಾ ಮಂಡಳಿ ತಕ್ಷಣ ನನಗೆ ನ್ಯಾಯ ಒದಗಿಸಬೇಕು" ಎಂದು ವಿದ್ಯಾರ್ಥಿ ಸಂತೋಷ ಖೇಡದ ಮನವಿ ಮಾಡಿದ್ದಾನೆ.

# ಪೀಸ್ ಇಂಟರ್‌ನ್ಯಾಶನಲ್ ಪ್ರೌಢಶಾಲೆ ಉತ್ತಮ ಫಲಿತಾಂಶ



■ ಉದಯರಶ್ಮಿ ದಿನಪತ್ರಿಕೆ

ಕಲಕೇರಿ: ಗ್ರಾಮದ ಪೀಸ್ ಇಂಟರ್‌ನ್ಯಾಶನಲ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿಗಳು 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ರಷ್ಟು ಫಲಿತಾಂಶದೊಂದಿಗೆ ಉತ್ತಮ ಸಾಧನೆ ಮಾಡಿದ್ದಾರೆ.

ಆಂಗ್ಲ ಮಾಧ್ಯಮದ ಕುಮಾರಿ ಉಮ್ಮೆ ಐಮನ ಉಸ್ತಾದ 581 (93%) ಮತ್ತು ಕುಮಾರಿ ಫರಹನಾಜ ಕೋಬಾಳ 581(93%) ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದಿದ್ದು, ಕುಮಾರಿ ಅರೂಶಾ ಮಂದೇವಾಲ 578 (92.48%) ದ್ವಿತೀಯ ಸ್ಥಾನ ಹಾಗೂ ಕುಮಾರಿ ಸೌಬಿಯಾ ಮೋಮಿನ 550(88%) ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಪರೀಕ್ಷೆಗೆ ಹಾಜರಾದ ಎಲ್ಲ ವಿದ್ಯಾರ್ಥಿಗಳು ಪಾಸಾಗಿದ್ದು, ಶಾಲೆಯ ಒಟ್ಟು ಪಲಿತಾಂಶ ಶೇ.100 ರಷ್ಟಾಗಿದೆ. ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿಯ ಸರ್ವ ಸದಸ್ಯರು, ಮುಖ್ಯಗುರುಗಳಾದ ಚಾಂದಪಾಶಾ ಹವಾಲ್ದಾರ ಸೇರಿದಂತೆ ಶಾಲೆಯ ಎಲ್ಲ ಸಿಬ್ಬಂದಿ ವರ್ಗ ಮೆಚ್ಚುಗೆ ವ್ಯಕ್ತಪಡಿಸಿ ವಿದ್ಯಾರ್ಥಿಗಳಿಗೆ ಶುಭಕೋರಿದ್ದಾರೆ.

# ಗುರುದೇವ ಅಂತರಾಷ್ಟ್ರೀಯ ವಸತಿ ಶಾಲೆ ಉತ್ತಮ ಫಲಿತಾಂಶ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಶ್ರೀ ರವೀಂದ್ರನಾಥ ಟ್ಯಾಗೋರ್ ಶಿಕ್ಷಣ ಸಂಸ್ಥೆಯ ಶ್ರೀ ಗುರುದೇವ ಪಬ್ಲಿಕ್ ಅಂತರಾಷ್ಟ್ರೀಯ ವಸತಿ ಶಾಲೆಯ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮ ರೀತಿಯಲ್ಲಿ ಬಂದಿದೆ.

ಈ ಸಲದ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾದವರು 82, ಡಿಸ್ಟಿಂಕ್ಷನ–13, ಫಸ್ಟಕ್ಲಾಸ್–40, ಸೆಕೆಂಡಕ್ಲಾಸ –14, ಪಾಸಕ್ಲಾಸ–9 ಫಲಿತಾಂಶ ಪಡೆದುಕೊಂಡಿದ್ದಾರೆ. ಅದರಲ್ಲಿ ಕುಮಾರಿ ದಿವ್ಯಾ ಮರೋಳ 609 ಅಂಕಗಳನ್ನು ಪಡೆಯುವ ಮೂಲಕ ಪ್ರಥಮ ಸ್ಥಾನ ಗಳಿಸಿದ್ದಾಳೆ. ಹಾಗೆಯೇ ಶಿವಲಿಂಗ ಕಿಣಗಿ 580 ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಪಡೆದರೆ ಮೊಹಮ್ಮದ ಮುಜಾಹಿದ್ ಕಾಚೂರ577 ಅಂಕಗಳನ್ನು ಪಡೆಯುವ ಮೂಲಕ ತೃತಿಯ ಸ್ಥಾನ ಗಳಿಸಿದ್ದಾನೆ. ಉತ್ತಮ ಫಲಿತಾಂಶ ಪಡೆದ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷ ಡಾ॥ ರವೀಂದ್ರ ಭೋಸಲೆ, ಶ್ರೀಮತಿ ಡಾ॥ ಉಮಾ ಭೋಸಲೆ, ಸಂಸ್ಥಾಪಕರ ಕಾರ್ಯದರ್ಶಿ ರಾಮಚಂದ್ರ ಭೋಸಲೆ, ಸುಧೀರ ಭೋಸಲೆ ಮುಖ್ಯ ಗುರುಗಳು ಹಾಗೂ ಎಲ್ಲಾ ಸಿಬ್ಬಂಧಿ ಹರ್ಷ ವ್ಯಕ್ತ ಪಡಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆ ಬೃಹತ್ ಶಿಬಿರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ ಅಂಬೇಡ್ಕರ ಅವರ 135ನೇ ಜಯಂತಿ ಉತ್ಸವ ಅಂಗವಾಗಿ ಬಬಲೇಶ್ವರ ತಾಲೂಕಿನ ಜಂಬಗಿ ಎಚ್. ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಇದೇ ಮೊದಲ ಬಾರಿಗೆ ಮಂಗಳವಾರ ಶ್ರೀ. ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ ಆಸ್ಪತ್ರೆ ಹಾಗೂ ಸಂಶೋಧನ ಕೇಂದ್ರ ಹಾಗೂ ಜಂಬಗಿಯ ಡಾ. ಬಾಬಾಸಾಹೇಬ ಅಂಬೇಡ್ಕರ ತರುಣ ಸಂಘ ಜಂಬಗಿ ಎಚ್ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆ ಬೃಹತ್ ಶಿಬಿರ ನಡೆಯಿತು.

25ನೇ ಏಪ್ರಿಲ್ 1970ರಲ್ಲಿ ಅಂದಿನ ಮೈಸೂರು ರಾಜ್ಯದ ಪೌರಾಡಳಿತ ಸಚಿವ ಬಿ. ಎಂ. ಪಾಟೀಲ ಅವರು ಈ ಶಾಲೆಯನ್ನು ಉದ್ಘಾಟಿಸಿದ್ದು ಇಂದು ಶತಮಾನೋತ್ಸವ ದಿನದಂದು ಈ ಆರೋಗ್ಯ ತಪಾಸಣೆ ಶಿಬಿರ ಆಯೋಜನೆ ಮಾಡಿದ್ದು ಗಮನಾರ್ಹವಾಗಿತ್ತು. ಈಗ ಈ ಶತಮಾನದ ಈ ಶಾಲೆಗೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರು ಸಿ.ಎಸ್.ಆರ್ ಅನುದಾನದಲ್ಲಿ ಹೊಸದಾಗಿ ಕೊಠಡಿಗಳು, ಶೌಚಾಲಯ ಹಾಗೂ ಕ್ರೀಡಾ ಸಾಮಾಗ್ರಿಗಳನ್ನು ಮಂಜೂರು ಮಾಡಿದ್ದಾರೆ.

ಅಂಬೇಡ್ಕರ ಭಾವಚಿತ್ರಕ್ಕೆ ಪುಷ್ಪನಮನ ಮಾಡುವ ಮೂಲಕ ಶಿಬಿರಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಊರಿನ ಹಿರಿಯರಾದ ಎಚ್. ಎಸ್. ಕೋರಡ್ಡಿ, ಕಲ್ಲಪ್ಪಗೌಡ ಕೊಡಬಾಗಿ, ಎಚ್. ಕೆ. ನ್ಯಾಮಗೌಡ, ದುಂಡಣ್ಣಗೌಡ ಕೋರಡ್ಡಿ, ಪಿ. ವಿ. ಚಿಗದಾನಿ, ತಿಮ್ಮನಗೌಡ ಪಾಟೀಲ, ಹನುಮಂತ ಕಜ್ಜಿದೋಣಿ, ಭೀಮಪ್ಪ ಕಜ್ಜಿದೋಣಿ, ಶಾಲೆಯ ಎಸ್. ಡಿ.ಎಂ.ಸಿ ಅಧ್ಯಕ್ಷರು ಹಾಗೂ ಸದಸ್ಯರು. ಮತ್ತು ಡಾ. ಬಿಆರ್ ಅಂಬೇಡ್ಕರ್ ತರುಣ ಸಂಘದ ಸರ್ವ ಸದಸ್ಯರು, ಹಿರಿಯರು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

ಈ ಶಿಬಿರದಲ್ಲಿ ವೈದ್ಯಕೀಯ ಚಿಕಿತ್ಸೆ ವಿಭಾಗ, ಶಸ್ತ್ರಚಿಕಿತ್ಸೆ ವಿಭಾಗ,ಎಲುಬು ಮತ್ತು ಕೀಲು ಚಿಕಿತ್ಸೆ ವಿಭಾಗ, ಹೆರಿಗೆ ಮತ್ತು ಪ್ರಸೂತಿ ವಿಭಾಗ, ಚಿಕ್ಕ ಮಕ್ಕಳ ಚಿಕಿತ್ಸೆ ವಿಭಾಗ, ಚರ್ಮರೋಗ ಚಿಕಿತ್ಸೆ ವಿಭಾಗ, ನೇತ್ರ ಚಿಕಿತ್ಸೆ ವಿ ಭಾಗ, ದಂತ ಚಿಕಿತ್ಸೆ ವಿಭಾಗಗಳ ಎಲ್ಲ ತಜ್ಞ ವೈದ್ಯರು ಪಾಲ್ಗೊಂಡು ಚಿಕಿತ್ಸೆ ನೀಡಿದರು.

ಜಂಬಗಿ ಎಚ್. ಮತ್ತು ಸುತ್ತಮುತ್ತಲಿನ ಗ್ರಾಮದ ನೂರಾರು ರೋಗಿಗಳು ಈ ಶಿಬಿರದ ಸದುಪಯೋಗ ಪಡೆದುಕೊಂಡರು.

# 47 ಸಾವಿರ ಜಾನುವಾರುಗಳಿಗೆ ಲಸಿಕೆ ಗುರಿ : ಡಾ. ರಾಜಕುಮಾರ ಅಡಕಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಪಶು ಸಂಗೋಪನಾ ಇಲಾಖೆ ಅಡಿಯಲ್ಲಿ ಜಾನುವಾರುಗಳಿಗೆ ಕಾಲು ಬಾಯಿ ಬೇನೆ ನಿಯಂತ್ರಣಕ್ಕೆ ನಗರ ಸೇರಿದಂತೆ ತಾಲೂಕಿನಲ್ಲಿ 9 ನೇ ಸುತ್ತಿನ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ ಎಂದು ಹಿರಿಯ ಪಶು ವೈದ್ಯಾಧಿಕಾರಿ ಡಾ. ರಾಜಕುಮಾರ ಅಡಕಿ ತಿಳಿಸಿದ್ದಾರೆ.

ಆಸ್ಪತ್ರೆಯ ಆವರಣದಲ್ಲಿ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು 47443 ಜಾನುವಾರುಗಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದೆ . ಇಂಡಿ ತಾಲೂಕಿನಲ್ಲಿ ಜಾನುವಾರುಗಳ ಆರೋಗ್ಯದ ದೃಷ್ಟಿಯಿಂದ ಏ. 23 ರಿಂದಲೇ ಲಸಿಕೆ ನೀಡವ ಕಾರ್ಯ ಆರಂಭವಾಗಿದ್ದು ಮೇ 22 ರ ವರೆಗೆ ನಡೆಯಲಿದೆ ಎಂದರು.

ಲಸಿಕೆ ನೀಡಲು ಇಂಡಿ ತಾಲೂಕಿನಲ್ಲಿ ಒಟ್ಟು 12 ಸುಪರವಾಯಿಜರ ಮತ್ತು 48 ಲಸಿಕೆದಾರರು ಕಾರ್ಯನಿರ್ವಹಿಸುವರು.

ಲಸಿಕೆದಾರರು ಗ್ರಾಮೀಣ ಭಾಗದಲ್ಲಿ ಮನೆ ಮನೆ ತೆರಳಿ ತೋಟ ಮತ್ತು ಹೊಲ ಗದ್ದೆ ರೈತರ ವಸತಿ ಕೇಂದ್ರಕ್ಕೆ ಸಂಪರ್ಕಿಸಿ ಲಸಿಕೆ ನೀಡಿ ಅಭಿಯಾನ ಯಶಸ್ವಿಗೊಳಿಸುವರು. ಸಿಬ್ಬಂದಿಗೆ ಲಸಿಕೆ ನೀಡುವ ಕುರಿತು ತರಬೇತಿ ನೀಡಲಾಗಿದ್ದು ನೂರಕ್ಕೆ ನೂರರಷ್ಟು ಗುರಿ ಹೊಂದಲಾಗಿದೆ ಎಂದರು. ಲಸಿಕೆ ನೀಡಲು ಸಿಬ್ಬಂದಿಗೆ ಹಳದಿ ಬಣ್ಣದ ಟಿ ಶರ್ಟ ನೀಲಿ ಬಣ್ಣದ ಟೊಪ್ಪಿಗೆ ವಿತರಣೆ ಮಾಡಲಾಗಿದೆ. ರೈತರು ಸಾಕಿದ ಪ್ರತಿ ಜಾನುವಾರುಗಳಿಗೆ ಕಡ್ಡಾಯ ಲಸಿಕೆ ನೀಡಿ ಅವುಗಳ ಆರೋಗ್ಯ ರಕ್ಷಣೆ ಮತ್ತು ಕೃಷಿಕರ ಜೀವನೋಪಾಯ ಸಂರಕ್ಷಿಸಲು ಯಾವದೇ ತೊಂದರೆಯಾಗದಂತೆ ದಾಸ್ತಾನು ಸಂಗ್ರಹಿಸಲಾಗಿದೆ ಎಂದರು.

ಡಾ. ಪ್ರಕಾಶ ಮಿರ್ಜಿ, ಡಾ. ರವಿ ಖಂಡೇಕರ, ರಾಮಣ್ಣ ಉಪ್ಪಾರ, ಜಾವೇದ ಬಾಗವಾನ, ಬಸವರಾಜ ಮುಂಜಿ, ಶ್ರೀಕಾಂತ ಮೂಡಲಗಿ, ಡಾ. ಪ್ರಶಾಂತ ಬಳುಂಡಗಿ, ಡಾ. ಲಕ್ಷೀಶ ಕಟ್ಟಿಮನಿ,ಸಂತೋಷ ಚವ್ಹಾಣ ಮತ್ತಿತರಿದ್ದರು.

# ಡಿವೈಎಫ್‌ಐ ಸಂಘಟನೆ ಮುಖಂಡರ ಬಂಧನಕ್ಕೆ ತೀವ್ರ ಖಂಡನೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರಕಾರಿ ಮೆಡಿಕಲ್ ಕಾಲೇಜು ಶೀಘ್ರವೇ ಸ್ಥಾಪಿಸಲು ಒತ್ತಾಯಿಸಿ ಹಾಗೂ ಸರಕಾರಿ ಆಸ್ಪತ್ರೆಗಳ ಪರವಾಗಿ ಮಂಗಳೂರಿನಲ್ಲಿ ಶಾಂತಿಯುತವಾಗಿ ಡಿವೈಎಫ್‌ಐ ಸಂಘಟನೆ ನೇತೃತ್ವದಲ್ಲಿ ಪ್ರತಿಭಟನೆ ನಡೆಸುತ್ತಿದ್ದ ಯುವ ಜನರು ಹಾಗೂ ಸಮಾನ ಮನಸ್ಕ ಸಂಘಟನೆಯ ಮುಖಂಡರು ಹಾಗೂ ಕಾರ್ಯಕರ್ತರನ್ನು ರಾಜ್ಯ ಸರಕಾರ ಪೋಲಿಸರ ಮೂಲಕ ಬಂಧಿಸಿರುವುದನ್ನು ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ ತಾಲೂಕ ಸಮಿತಿಯು ತೀವ್ರವಾಗಿ ಖಂಡಿಸುತ್ತದೆ ಎಂದು ತಾಲೂಕಾಧ್ಯಕ್ಷ ರಮೇಶ ಸಾಸಾಬಾಳ ತಿಳಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕ ನೀಡಿರುವ ಅವರು, ಸರಕಾರಿ ಆಸ್ಪತ್ರೆಗಳನ್ನು ಖಾಸಗೀ ಆಸ್ಪತ್ರೆಗೆ ವಹಿಸಿಕೊಟ್ಟಿರುವ ಕರಾರು ಒಪ್ಪಂದ ರದ್ದುಗೊಳಿಸಲು, ವೆನ್ಲಾಕನ್ನು ಪ್ರಾದೇಶಿಕ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಿ, ಖಾಸಗೀಕರಣದ ಪಿಪಿಪಿ ಮಾದರಿ ಕೈಬಿಡಲು, ಜಯದೇವ–ಕಿದ್ವಾಯಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ದಕ್ಷಿಣ ಕನ್ನಡ ಜಿಲ್ಲೆಯಲ್ಲು ಸ್ಥಾಪಿಸಲು, ಜನಸಂಖ್ಯೆಗೆ ಅನುಗುಣವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಪ್ರತೀ ತಾಲೂಕಿಗೂ ಸಾರ್ವಜನಿಕ ತಾಲೂಕು ಆಸ್ಪತ್ರೆ ಸ್ಥಾಪಿಸುವಂತೆ ಪ್ರಜಾಸತ್ತಾತ್ಮಕ ನೆಲೆಯಲ್ಲಿ ಆಗ್ರಹಿಸಿ ಉಸ್ತುವಾರಿ ಮಂತ್ರಿಗಳ ಕಛೇರಿ ಚಲೋ ನಡೆಸುತ್ತಿದ್ದವರನ್ನು ರಾಜ್ಯ ಸರಕಾರ ಬಂಧಿಸಿರುವುದು ನಾಚಿಕೆಗೇಡು ಎಂದು ಹರಿಹಾಯ್ದರು.

ಸಮಾಜವಾದಿ ಹಿನ್ನೆಲೆಯ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಏನಾದರೂ ಜನಬದ್ಧತೆ ಮತ್ತು ಜನಪರ ಕಾಳಜಿ ಇದ್ದರೆ ಕೂಡಲೇ ಡಿವೈಎಫ್‌ಐ ಸಂಘಟನೆ ಎತ್ತಿರುವ ಬೇಡಿಕೆಗಳನ್ನು ಈಡೇರಿಸಬೇಕು. ಜನಪರವಾಗಿ ಧ್ವನಿ ಎತ್ತಿದವರನ್ನೇ ಪೋಲಿಸರ ಮೂಲಕ ಬಂಧನ ಮಾಡಿ ಧ್ವನಿ ಹತ್ತಿಕ್ಕುವ ರಾಜ್ಯ ಸರಕಾರದ ನೀತಿಗೆ ಡಿವೈಎಫ್‌ಐ ಸಂಘಟನೆ ಮಣಿಯುವುದಿಲ್ಲ. ರಾಜ್ಯ ಸರಕಾರ ಖಾಸಗೀ ಆಷ್ಪತ್ರೆಗಳ ಲಾಭಿಗೆ ಮಣಿದು ಸರಕಾರಿ ಆಷ್ಪತ್ರೆಗಳನ್ನು ಬಲಹೀನಗೊಳಿಸುತ್ತಿರುವುದು ನಾಡಿನ ಜನತೆಗೆ ಬಗೆಯುತ್ತಿರುವ ದ್ರೋಹವಾಗಿದೆ. ಆರೋಗ್ಯ ಸೌಲಭ್ಯ ಕೇಳಿದವರನ್ನು ಪೋಲಿಸರನ್ನು ಬಿಟ್ಟು ಬಂಧಿಸಲು ಮುಂದಾಗುತ್ತಿರುವ ಸರಕಾರದ ನಡೆಯನ್ನು ರಾಜ್ಯದ ಜನತೆ ಸಹಿಸುವುದಿಲ್ಲ.

ರಾಜ್ಯ ಸರಕಾರ ಡಿವೈಎಫ್‌ಐ ಸಂಘಟನೆ ಎತ್ತಿರುವ ಜನರಿಗೆ ಆರೋಗ್ಯ ಅನುಕೂಲ ಕಲ್ಪಿಸುವ ಈ ಪ್ರಮುಖ ಬೇಡಿಕೆಗಳನ್ನು ಕೂಡಲೇ ಈಡೇರಿಸಲು ಕೂಡಲೇ ಕ್ರಮ ಕೈಗೊಳ್ಳಬೇಕು ಹಾಗೂ ಬಂಧಿಸಿದ ಡಿವೈಎಫ್‌ಐ ಮುಖಂಡರನ್ನು ಬೇಷರತ್ ಆಗಿ ತಕ್ಷಣ ಬಿಡುಗಡೆ ಮಾಡಬೇಕು. ಇಲ್ಲವಾದಲ್ಲಿ ರಾಜ್ಯವ್ಯಾಪಿ ತೀವ್ರತರೆನಾದ ಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ಡಿವೈಎಫ್‌ಐ ತಾಲೂಕ ಸಮಿತಿಯು ಎಚ್ಚರಿಸುತ್ತದೆ ಎಂದಿದ್ದಾರೆ.

# ಕಾಂಗ್ರೆಸ್ ಸರ್ಕಾರದಿಂದ ಒಳ ಮೀಸಲಾತಿ ವೈಜ್ಞಾನಿಕವಾಗಿ ಅನುಷ್ಠಾನ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಎಷ್ಟೋ ವರುಷಗಳಿಂದ ಜಾರಿಯಾಗದ ಒಳ ಮೀಸಲಾತಿಯನ್ನು ಯಾವ ಸಮಾಜಕ್ಕೂ ಅನ್ಯಾಯ ಮಾಡದೇ ಅತ್ಯಂತ ವೈಜ್ಞಾನಿಕವಾಗಿ ಕಾಂಗ್ರೆಸ್ ಸರ್ಕಾರ ಅನುಷ್ಠಾನಗೊಳಿಸಿದೆ ಎಂದು ಜಿಲ್ಲಾ ಕಾಂಗ್ರೆಸ್ ಎಸ್.ಸಿ. ಘಟಕದ ಅಧ್ಯಕ್ಷ ರಮೇಶ ಗುಬ್ಬೇವಾಡ ಹೇಳಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳ ಮೀಸಲಾತಿಗೆ ಸಂಬಂಧಿಸಿದಂತೆ ಕೇವಲ ಬಿಜೆಪಿ ಭರವಸೆ ನೀಡುತ್ತಲೇ ಹೋಯಿತು, ಅಧಿಕಾರಕ್ಕೆ ಬಂದರೂ ಒಳಮೀಸಲಾತಿ ಜಾರಿಗೊಳಿಸಲಿಲ್ಲ, ಆದರೆ ಕಾಂಗ್ರೆಸ್ ಸರ್ಕಾರ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದಂತೆ ಒಳ ಮೀಸಲಾತಿಯನ್ನು ಜಾರಿಗೊಳಿಸಿದೆ, ಬಲಗೈ ಸಮುದಾಯಕ್ಕೆ ಶೇ.5.5, ಎಡಗೈ ಸಮುದಾಯಕ್ಕೆ ಶೇ.5.5. ಹಾಗೂ ಅಲೆಮಾರಿ ಸಮುದಾಯಗಳಿಗೆ ಶೇ.4.5 ಮೀಸಲಾತಿ ಕಲ್ಪಿಸಲಾಗಿದೆ, ಅಲೆಮಾರಿ ಸಮುದಾಯಕ್ಕೂ ಅನ್ಯಾಯವಾಗದ ರೀತಿಯಲ್ಲಿ ಕಾಂಗ್ರೆಸ್ ಸರ್ಕಾರ ಅನುಷ್ಠಾನಗೊಳಿಸಿದೆ, ಅಲೆಮಾರಿ ಸಮುದಾಯಕ್ಕೂ ನ್ಯಾಯ ದೊರಕಬೇಕು ಎಂಬುದು ನಮ್ಮ ನಿಲುವು ಕೂಡಾ ಹೌದು, ರೋಸ್ಟರ್ ಸಹ ವೈಜ್ಞಾನಿಕವಾಗಿ ಪ್ರಕ್ರಿಯೆ ಜಾರಿಗೊಳಿಸಲು ಸರ್ಕಾರ ಮುಂದಾಗಿದೆ ಎಂದರು.

ಎಸ್‌ಇಟಿ–ಟಿಎಸ್‌ಪಿ ಎಂಬ ವಿಶೇಷ ಯೋಜನೆಯನ್ನು ರೂಪಿಸಿದ್ದೆ ಕಾಂಗ್ರೆಸ್ ಸರ್ಕಾರ, ಎಸ್.ಸಿ.–ಎಸ್‌ಟಿ ಅನುದಾನವನ್ನು ಯಾವ ಕಾರಣಕ್ಕೂ ದುರ್ಬಳಕೆಯಾಗಿಲ್ಲ ಆ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದರು.

ಪಾಲಿಕೆ ಸದಸ್ಯೆ ಆರತಿ ಶಹಾಪೂರ ಮಾತನಾಡಿ, ಗ್ಯಾರಂಟಿ ಯೋಜನೆಗಳ ಜನಪ್ರಿಯತೆ ಸಹಿಸದೇ ಬಿಜೆಪಿ ಕೇವಲ ಜನರ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ, ವಿನಾಕಾರಣ ದಲಿತರ ಅನುದಾನ ಬೇರೆ ಉದ್ದೇಶಕ್ಕೆ ಬಳಕೆ ಮಾಡಿಕೊಂಡಿದೆ ಎಂದು ತಪ್ಪು ಕಲ್ಪನೆ ಬಿತ್ತುವ ಪ್ರಯತ್ನ ಮಾಡುತ್ತಿದೆ ಎಂದರು.

ಮುಖಂಡರಾದ ಎಂ. ಎಂ. ಮುಲ್ಲಾ, ವಸಂತ ಹೊನಮೋಡೆ, ಮಹಾದೇವ ಚಲವಾದಿ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಅಕ್ರಮ ಅಕ್ಕಿ ಸಾಗಣೆ: ಆರೋಪಿಗಳಿಂದ 32,850 ಕೆಜಿ ಅಕ್ಕಿ ವಶ

■ ಉದಯರಶ್ಮಿ ದಿನಪತ್ರಿಕೆ

**ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳಿಂದ ದಾಳಿ । ಮೂವರ ಬಂಧನ**

ವಿಜಯಪುರ: ಅನ್ನ ಭಾಗ್ಯ ಯೋಜನೆಯಡಿ ಅಕ್ರಮ ಅಕ್ಕಿ ಸಾಗಣೆ ಪತ್ತೆ ಮಾಡಿರುವ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳು ಮೂವರನ್ನು ಬಂಧಿಸಿ ಅವರಿಂದ ಪಡಿತರ ಅಕ್ಕಿ ವಶಪಡಿಸಿಕೊಂಡ ಘಟನೆ ತಾಲೂಕಿನ ಹಿಟ್ಟಿನಹಳ್ಳಿ ಗ್ರಾಮದ ಹೋಟೆಲ್ ಸಾಹಿಲ ಎದುರುಗಡೆ ರಾಷ್ಟ್ರೀಯ ಹೆದ್ದಾರಿಯಲ್ಲಿ ನಡೆದಿದೆ.

ಮಹಾಂತೇಶ ಹನಮಪ್ಪ ಬಾಲಕನವರ, ಹನುಮೇಶ್ ದೊಡ್ಡಬಸಪ್ಪ ಗೋನಾಳ ಎಂಬುವರ ವಿರುದ್ಧ ವಿಜಯಪುರ ಗ್ರಾಮೀಣ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಅನ್ನಭಾಗ್ಯ ಯೋಜನೆಯಡಿ ಹಂಚಲ್ಪಡುವ ಅಕ್ಕಿ ಅಕ್ರಮ ಸಾಗಣೆಯಾಗುತ್ತಿದೆ ಎಂಬ ಖಚಿತ ಮಾಹಿತಿ ಆಧರಿಸಿ ಆಹಾರ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ, ಅಕ್ರಮವಾಗಿ ಸಾಗಣೆಯಾಗುತ್ತಿದ್ದ ಅಕ್ಕಿ ಹಾಗೂ ಲಾರಿಯನ್ನು ವಶಕ್ಕೆ ಪಡೆದಿದ್ದಾರೆ. ಅರೋಪಿಗಳಿಂದ 32850 ಕೆಜಿ ಅಕ್ಕಿ ಹಾಗೂ ಲಾರಿ ವಶಪಡಿಸಿಕೊಂಡಿದ್ದಾರೆ.

ದಾಳಿಯಲ್ಲಿ ಆಹಾರ ನಿರೀಕ್ಷಕರಾದ ವಿಜಯಕುಮಾರ ಗುಮಶೆಟ್ಟಿ, ಎ ಎಸ್ ಐ ಆರ್. ಎನ್. ಪರಗುಳಿ, ಸಿಬ್ಬಂದಿ ಬಸವರಾಜ ಅಂಬಿಗೇರ ಪಾಲ್ಗೊಂಡಿದ್ದರು ಎಂದು ಆಹಾರ ಇಲಾಖೆಯ ಉಪ ನಿರ್ದೇಶಕರಾದ ವಿನಯ ಕುಮಾರ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR